# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 05 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–07–2024 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 02 Issue - 05 | Title- Code: KARKAN 28269 | Chitradurga | Date: 15-07-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಿಎಂ ಸಿದ್ದರಾಮಯ್ಯಗೆ ಬೆನ್ನಿಗೆ ಇದೆ ದಲಿತ ಶಕ್ತಿ: ಆಂಜನೇಯ 2

ಸತ್ಯಕ್ಕೆ ಹತ್ತಿರವಾದ ಸುದ್ದಿಗಳಿಗೆ ಮಾತ್ರ ಜನಮನ್ನಣೆ: ಸಚಿವ ಡಿ.ಸುಧಾಕರ್ 3

ಕಾಡುಗೊಲ್ಲ, ಮ್ಯಾಸಬೇಡರ ಬುಡಕಟ್ಟು ಸಂಸ್ಕೃತಿಗೆ ಜಿಲ್ಲೆಯ ಕೊಡುಗೆ ಅಪಾರ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಡೆಂಗ್ಯೂ ನಿಯಂತ್ರಿಸಿ: ಡೆಂಗ್ಯೂ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

# ಸೊಳ್ಳೆ ಉತ್ಪತ್ತಿ ತಾಣ ನಾಶ ಪಡಿಸಿ

» ಚಿತ್ರದುರ್ಗ

ಡೆಂಗ್ಯೂ ನಿಯಂತ್ರಣಕ್ಕಾಗಿ ಜಿಲ್ಲೆಯಾದ್ಯಂತ ನಿರಂತರವಾಗಿ ಲಾರ್ವಾ ಸಮೀಕ್ಷೆ ನಡೆಸಿ, ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಡೆಂಗ್ಯೂ ಜ್ವರದ ಮುಂಜಾಗ್ರತೆ ಹಾಗೂ ನಿಯಂತ್ರಣ ಕಾರ್ಯಗಳ ಹಿನ್ನಲೆಯಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಹಮ್ಮಿಕೊಂಡಿದ್ದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಹಳ್ಳಿಗಳಲ್ಲಿ ನೈರ್ಮಲ್ಯ ಕಾಪಾಡುವ ಸಲುವಾಗಿ ಚರಂಡಿ ಸ್ವಚ್ಛತೆಗೆ ಬ್ಲೀಚಿಂಗ್ ಪೌಡರ್ ಸಿಂಪಡಣೆ ಮಾಡಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹೆಚ್ಚು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ, ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ವಹಿಸಬೇಕು. ವಾರಕೊಮ್ಮೆ ಚರಂಡಿಗಳ ಸ್ವಚ್ಚತೆ ಮಾಡಿಸಬೇಕು. ಸೊಳ್ಳೆ ನಿಯಂತ್ರಣಕ್ಕೆ ಮುಖ್ಯವಾಗಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲಾಸ್ಪತ್ರೆಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ: ಜಿಲ್ಲಾಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಯ ಮುಂಭಾಗದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಚಿವ ಡಿ.ಸುಧಾಕರ್ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಅವರಿಗೆ ಸೂಚನೆ ನೀಡಿದರು.



ಜಿಲ್ಲಾಸ್ಪತ್ರೆಯಲ್ಲಿ ಸ್ವಚ್ಛತೆ ಇಲ್ಲ ಎಂದು ಸಾಕಷ್ಟು ದೂರುಗಳು ಬರುತ್ತಿವೆ. ನಗರಸಭೆಯೊಂದಿಗೆ ಸಮನ್ವಯ ಮಾಡಿಕೊಂಡು, ಸ್ವಚ್ಛತೆಗೆ ಕ್ರಮವಹಿಸಬೇಕು ಎಂದು ಸಚಿವರು ಸೂಚಿಸಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕಾಗಿ ಲಾರ್ವಾ ಸಮೀಕ್ಷೆ ನಡೆಸಿ, ಲಾರ್ವಾ ನಾಶ ಚಟುವಟಿಕೆ ಕಾರ್ಯವನ್ನು ನಿರಂತರವಾಗಿ ಮಾಡಲಾಗುತ್ತಿದೆ. ಡೆಂಗ್ಯೂ ರೋಗಕ್ಕೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ. ರೋಗ ಲಕ್ಷಣಗಳಿಗೆ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತಿದೆ. ಡೆಂಗ್ಯೂ ನಿಯಂತ್ರಣಕ್ಕಾಗಿ ಸೂಕ್ತ ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಮಳೆಗಾಲದಸಂದರ್ಭದಲ್ಲಿವಿಶೇಷವಾಗಿ ಜುಲೈ ಹಾಗೂ ಆಗಸ್ಟ್ ತಿಂಗಳಲ್ಲಿ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಮಳೆಗಾಲದ ನಂತರ ಡೆಂಗ್ಯೂ ಪ್ರಕರಣಗಳು ಕಡಿಮೆಯಾಗಲಿವೆ. ಡೆಂಗ್ಯೂ ಜ್ವರ ಹರಡದಂತೆ ಹಾಗೂ ಸೊಳ್ಳೆಗಳು ಹೆಚ್ಚಾಗದಂತೆ ನಿಯಂತ್ರಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಡೆಂಗ್ಯೂ ನಿಯಂತ್ರಣಕ್ಕಾಗಿ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ. ಹಾಗಾಗಿ ಡೆಂಗ್ಯೂ ನಿಯಂತ್ರಣಕ್ಕಾಗಿ ನಗರ ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಡೆಂಗ್ಯೂ ಪರೀಕ್ಷೆಗೆ ಸರ್ಕಾರ ನಿಗದಿಪಡಿಸಿರುವ ದರದ ಪ್ರಕಾರವೇ ಟೆಸ್ಟ್ ಮಾಡಬೇಕು. ಡೆಂಗ್ಯೂ ಜ್ವರದ ಚಿಕಿತ್ಸೆಗೆ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ 10 ರಿಂದ 15 ಹಾಸಿಗೆಗಳನ್ನು ಮೀಸಲಿಡಲು ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಲಾರ್ವಾ ಸಮೀಕ್ಷೆ ನಡೆಸಿ, ಸೊಳ್ಳೆಗಳ ಉತ್ಪತ್ತಿಗಳ ತಾಣಗಳನ್ನು ನಾಶ ಪಡಿಸಲಾಗುತ್ತಿದೆ. ಚಿತ್ರದುರ್ಗ ನಗರ ಪ್ರದೇಶದಲ್ಲಿ ಗುರುತಿಸಲಾಗಿರುವ ಹಾಟ್‌ಸ್ಪಾಟ್ ಪ್ರದೇಶಗಳಲ್ಲಿ ನಿರಂತರವಾಗಿ ಲಾರ್ವಾ ಸಮೀಕ್ಷೆ ನಡೆಸಿ, ಡೆಂಗ್ಯೂ ನಿರ್ಮೂಲನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಕಳೆದ ವರ್ಷಕ್ಕೆ ಹೋಲಿಕೆ ಮಾಡಿದಾಗ ಜಿಲ್ಲೆಯಲ್ಲಿ ಈ ಬಾರಿ ಡೆಂಗ್ಯೂ ಪ್ರಕರಣಗಳು ಹೆಚ್ಚಳವಾಗಿವೆ. ಡೆಂಗ್ಯೂ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಶುದ್ಧ ಕುಡಿಯುವ ನೀರು ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು. ದುರಸ್ತಿಗೆಬಂದಿರುವಆರ್.ಓ.ಘಟಕಗಳನ್ನು ತಕ್ಷಣ ರಿಪೇರಿ ಮಾಡಿ, ಸಾರ್ವಜನಿಕರಿಗೆ ನಿರಂತರವಾಗಿ ಶುದ್ಧ ನೀರು ಪೂರೈಕೆ ಮಾಡಬೇಕು, ಈ ರೀತಿ ಆದಾಗ, ಸಾರ್ವಜನಿಕರು ವಿನಾಕಾರಣ ನೀರು ಸಂಗ್ರಹಿಸಿ ಇಡುವುದು ತಪ್ಪಲಿದ್ದು, ಸೊಳ್ಳೆಗಳು ಕೂಡ ಹೆಚ್ಚಾಗುವುದನ್ನು ತಪ್ಪಿಸಿದಂತಾಗುತ್ತದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆರ್.ಓ.ಘಟಕಗಳುಎಷ್ಟು,ಎಷ್ಟುಘಟಕಗಳು ದುರಸ್ತಿಗೆ ಬಂದಿವೆ ಎಂಬುವುದರ ಕುರಿತು ವರದಿ ನೀಡಿ, ಆರ್.ಓ. ಘಟಕಗಳ ಹಳೆಯ ಯಂತ್ರಗಳ ತೆಗೆದು ಹಾಕಿ ಹೊಸ ಯಂತ್ರಗಳ ಅಳವಡಿಕೆಗೆ ಕ್ರಮವಹಿಸಬೇಕು. ಕಾರ್ಯನಿರ್ವಹಣೆ ಮಾಡುತ್ತಿರುವ ಎಲ್ಲ ಆರ್.ಓ.ಘಟಕಗಳ ನೀರಿನ ಮಾದರಿ ಪರೀಕ್ಷೆ ನಡೆಸಿ ವರದಿ ಸಲ್ಲಿಸಬೇಕು ಎಂದು ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚಿಸಿದರು. ಎಲ್ಲ ಮಾದರಿಯ ನೀರಿಗೂ ಒಂದೇ ರೀತಿಯ ಯಂತ್ರಗಳ ಅಳವಡಿಕೆಯಿಂದಾಗಿ ಶುದ್ಧ ಕುಡಿಯುವ ನೀರಿನ ಘಟಕಗಳು ಪದೇ ಪದೇ ದುರಸ್ತಿಗೆ ಬರುತ್ತಿವೆ. ನೀರಿನ ಮಾದರಿಗೆ ಅನುಗುಣವಾಗಿ ಹೊಸ ರೀತಿಯ ಯಂತ್ರಗಳ ಅಳವಡಿಕೆ ಮಾಡಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.ಸಭೆಯಲ್ಲಿ ಶಾಸಕರಾದ ಟಿ.ರಘುಮೂರ್ತಿ, ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ, ಡೆಂಗ್ಯೂ ನಿಯಂತ್ರಣ ಕಾರ್ಯಗಳಿಗೆ ನೇಮಕವಾಗಿರುವ ತಾಲ್ಲೂಕು ನೋಡಲ್ ಅಧಿಕಾರಿಗಳು, ತಹಶೀಲ್ದಾರ್‌ಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಬಲಿಜ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ

» ಚಳ್ಳಕೆರೆ

ತಾಲ್ಲೂಕಿನ ಶ್ರೀಯೋಗಿನಾರೇಯಣ ಯತೀಂದ್ರ ಬಲಿಜ ಸಂಘ ಯುವ ಘಟಕ ಹಾಗೂ ಮಹಿಳಾ ಘಟಕದ ಸಂಯುಕ್ತಾಶ್ರಯದಲ್ಲಿ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿಯಲ್ಲಿ ಶೇ. 90ರ ಅಂಕ ಪಡೆದ ಬಲಿಜ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಯುವಘಟಕದ ಅಧ್ಯಕ್ಷ ಜಿ.ವೆಂಕಟೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಎಸ್‌ಎಸ್‌ಎಲ್‌ಸಿ ದ್ವಿತೀಯ ಪಿಯುಸಿಯಲ್ಲಿ ಶೇ. 90ರ ಅಂಕ ಪಡೆದ ಸಮುದಾಯ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ, ಟಿ.ಸಿ ಜೆರಾಕ್ಸ್ ಪ್ರತಿ ಹಾಗೂ ಭಾವಚಿತ್ರಗಳನ್ನು ಜುಲೈ–16ರೊಳಗೆ ಶ್ರೀಕೃಷ್ಣ ಆಟೋಮೊಬೈಲ್ಸ್ ಖಾಸಗಿ ಬಸ್ಟಾಂಡ್ ಹಿಂಭಾಗದ ಇವರಿಗೆ ತಲುಪಿಸುವಂತೆ ಕೋರಿದೆ. ಹೆಚ್ಚಿನ ಮಾಹಿತಿಗೆ ಜಿ.ವೆಂಕಟೇಶ್–94486 56381, ನರಸಿಂಹಮೂರ್ತಿ–9611266930, ಹನುಮಂತರಾಯ–8088572739, ಬಿ.ಕೆ.ನಾಗರಾಜು (ರಾಜು)–94496 80854ಗೆ ಸಂಪರ್ಕಿಸಲು ಮನವಿ ಮಾಡಿದೆ.

### ದಿ.15ರಂದು ಜಿಲ್ಲಾ ವಕೀಲರ ಸಂಘದಿಂದ ಉಪನ್ಯಾಸ ಮಾಲಿಕೆ-10

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ಆರ್.ಎಲ್. ಲಾ ಕಾಲೇಜ್, ದಾವಣಗೆರೆ ಹಾಗೂ ಲಾಯರ್ಸ್ ಲಾ ಪಬ್ಲಿಷರ್ಸ್, ಬೆಂಗಳೂರು ಇವರುಗಳ ಸಹಯೋಗದಲ್ಲಿ ಜಿಲ್ಲಾ ವಕೀಲರ ಸಂಘದಿಂದ ಉಪನ್ಯಾಸ ಮಾಲಿಕೆ –10 ನೂತನ ಅಪರಾಧಿಕ ಕಾನೂನುಗಳ ಕೈಪಿಡಿ ಪುಸ್ತಕ ಲೋಕಾರ್ಪಣೆಯನ್ನು ದಿ.15ರ ಸೋಮವಾರ ಮಧ್ಯಾಹ್ನ 2.30ಗಂಟೆಗೆ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದೆ.ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ಪುಸ್ತಕ ಲೋಕಾರ್ಪಣೆ ಮಾಡಲಿದ್ದಾರೆ. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರು[illegible]ಕುಮಾರ್ ಅದ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಆರ್.ಎಲ್. ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಜಿ.ಎಸ್.ಯತೀಶ್ ಆಗಮಿಸಲಿದ್ದು,ನಿವೃತ್ತ ಪೊಲೀಸ್ ಮಹಾನಿರ್ದೇಶಕ ಹಾಗೂ ಕೃತಿ ಕರ್ತೃ ಡಾ. ಡಿ.ವಿ.ಗುರುಪ್ರಸಾದ್, ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ, ಭಾರತೀಯ ನ್ಯಾಯ ಸಂಹಿತೆ, ಭಾರತೀಯ ಸಾಕ್ಷ್ಯ ಅಧಿನಿಯಮ' ವಿಷಯದ ಕುರಿತು ಉಪನ್ಯಾಸ ನೀಡಲಿರುವರು ಎಂದು ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳ್ , ಕಾರ್ಯದರ್ಶಿ ಎಸ್. ಬಸವರಾಜ್, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್ ಎಂದು ತಿಳಿಸಿದ್ದಾರೆ.

### ಬುಡ್ನಹಟ್ಟಿ ಬಿ.ಪರಮೇಶ್‌ಗೆ ಡಾಕ್ಟರೇಟ್ ಪದವಿ

» ಚಳ್ಳಕೆರೆ

ಹರಿಹರ ತಾಲ್ಲೂಕಿನ ದೇವಾಲಯಗಳ ಕಲೆ ಮತ್ತು ವಾಸ್ತುಶಿಲ್ಪ ಒಂದು ಸಾಂಸ್ಕೃತಿಕ ಅಧ್ಯಯನ ಎಂಬ ವಿಷಯದಲ್ಲಿ ತಾಲ್ಲೂಕಿನ ಬುಡ್ನಹಟ್ಟಿಯ ಬಿ.ಪರಮೇಶ್ ಮೈಸೂರು ವಿಶ್ವವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕ ಡಾ.ಜಿ.ಕರಿಯಪ್ಪ ಮಾರ್ಗದರ್ಶನದಲ್ಲಿ ಮಂಡಿಸಿದ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿಯನ್ನು ಘೋಷಿಸಿದೆ. ಮೈಸೂರು ವಿವಿ ರಿಜಿಸ್ಟರ್ ಬೋರಯ್ಯ ಈ ಬಗ್ಗೆ ಪ್ರಕಟಣೆ ನೀಡಿ, ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇತಿಹಾಸ ಅತಿಥಿ ಉಪನ್ಯಾಸಕರಾದ ಬಿ.ಪರಮೇಶ್‌ಗೆ ಪಿಎಚ್‌ಡಿ ಪದವಿಘೋಷಿಸಿದ್ದಾರೆ.

### ಕನ್ನಡ ರಥಯಾತ್ರೆಯಲ್ಲಿ ತಹಸಿಲ್ದಾರ್ ತಿರುಪತಿ ಪಾಟೀಲ್ ಸಲಹೆ

## ಪ್ರತಿಯೊಬ್ಬರಿಗೂ ನಾಡು–ನುಡಿ ಬಗ್ಗೆ ತಿಳುವಳಿಕೆ ಅಗತ್ಯ

» ಹೊಸದುರ್ಗ

ಸರ್ಕಾರದ ಆದೇಶದಂತೆ ಕರ್ನಾಟಕ ಸಂಭ್ರಮಾಚರಣೆ 50 ರ ಹಿನ್ನೆಲೆಯಲ್ಲಿ ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ ಎಂಬ ಧ್ಯೇಯ ವಾಕ್ಯದಡಿ ರಾಜ್ಯದ್ಯಂತ ಕನ್ನಡ ಜ್ಯೋತಿ ರಥವು ರಾಜ್ಯಾದ್ಯಂತ ಸಂಚರಿಸುತ್ತಿದ್ದು, ಅದರಂತೆಯೇ, ಹೊಸದುರ್ಗ ತಾಲೂಕಿಗೆ ಬಂದಿದೆ. ನಾಡಿನಲ್ಲಿ ವಾಸಿಸುವ ಪ್ರತಿಯೊಬ್ಬರಿಗೂ ಕರ್ನಾಟಕದ ಇತಿಹಾಸ ಮತ್ತು ಕನ್ನಡ ಭಾಷೆಯ ಮಹತ್ವದ ಬಗ್ಗೆ ತಿಳುವಳಿಕೆ ಅಗತ್ಯವಾಗಿದ್ದು, 50ರ ಸಂಭ್ರಮದಲ್ಲಿ ಜನರಿಗೆ ಅರಿವು ಮೂಡಿಸಲು ಸರ್ಕಾರ ಮಹತ್ವದ ಕಾರ್ಯಕ್ರಮ ನಡೆಸುತ್ತಿದೆ.


ಪುಟ 2




### ಚಳ್ಳಕೆರೆ: ವಿವಿಧೆಡೆ ಜೂಜಾಟ: 17310 ಹಣ ಹಾಗೂ ಐವರ ವಶ

» ಚಳ್ಳಕೆರೆ

ಉಪವಿಭಾಗದ ಡಿವೈಎಸ್ಪಿ ಹಾಗೂ ಚಳ್ಳಕೆರೆ ಠಾಣಾ ಇನ್ಸ್‌ಪೆಕ್ಟರ್ ಮಾರ್ಗದರ್ಶನದಲ್ಲಿ ವಿವಿಧೆಡೆ ಜೂಜಾಟವಾಡುತ್ತಿದ್ದ ತಂಡವನ್ನು ಪತ್ತೆ ಹಚ್ಚಿ ಹಣ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕಿನ ಕಾಟಪ್ಪನಹಟ್ಟಿ ದುಗ್ಗಾವರ ರಸ್ತೆಯ ಮಧ್ಯಭಾಗದಲ್ಲಿ ರಘು ಹಾಗೂ ಇತರೆ ಮೂವರು ಇಸ್ಪೀಟ್ ಜೂಜಾಟವಾಡುತ್ತಿದ್ದ ಸಂದರ್ಭದಲ್ಲಿ ದಾಳಿ ನಡೆಸಿ ಜೂಜಾಟ ಹಣ 7110 ವಶಕ್ಕೆ ಪಡೆಯಲಾಗಿದೆ. ಗಂಜಿಗುಂಟೆ ಲಂಬಾಣಿ ಹಟ್ಟಿ ಬಳಿ ಹಾಡುಹಗಲೇ ಹನುಮಂತನಾಯ್ಕ, ಕೆ.ಸಿ.ವೀರೇಶ್ ಇವರು ಜೂಜಾಟವಾಡುತ್ತಿದ್ದು, ಸಾರ್ವಜನಿಕ ಮಾಹಿತಿ ಮೇರೆಗೆ ದಾಳಿ ನಡೆಸಿ ಜೂಜಾಟದ ಹಣ 10200ರೂಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಜನರಲ್ಲಿ ಕಲೆಯ ಬಗ್ಗೆ ವಿಶ್ವಾಸ ಹುಟ್ಟಿಸುವಲ್ಲಿ ಕನ್ನಡ ಚಿತ್ರರಂಗ ಸಫಲ: ಸಾಧುಕೋಕಿಲ

# ಕನ್ನಡಚಿತ್ರರಂಗದ ಬೆಳವಣಿಗೆಗೆ ಪ್ರೇಕ್ಷಕರ ವಿಶ್ವಾಸವೇ ಆಧಾರ

» ಚಳ್ಳಕೆರೆ/ ಪರಶುರಾಂಪುರ

ಕನ್ನಡಚಿತ್ರರಂಗಕ್ಕೆ ತನ್ನದೇಯಾದ ಇತಿಹಾಸವಿದೆ.50ರದಶಕದಿಂದಲೂಕನ್ನಡ ಚಿತ್ರರಂಗ ತನ್ನ ಕಾರ್ಯಚಟುವಟಿಕೆಯನ್ನು ಆರಂಭಿಸಿತಾದರೂ 60ರ ದಶಕದ ನಂತರ ಕನ್ನಡ ಚಿತ್ರರಂಗ ತನ್ನ ಪ್ರಭಾವವನ್ನು ಬೀರಲಾರಭಿಸಿತು. ಇಂದು ಹಲವಾರು ನೂತನ ತಾಂತ್ರಿಕತೆಗಳ ನಡುವೆಯೂ ಸಹ ಚಿತ್ರರಂಗ ತನ್ನದೇಯಾದ ಮೌಲ್ಯವನ್ನು ಉಳಿಸಿಕೊಂಡಿದೆ. ಎಲ್ಲಿಯ ತನಕ ಚಿತ್ರಪ್ರೇಮಿಗಳು ವಿಶ್ವಾಸವಿಟ್ಟು ಕಲಾವಿದರನ್ನು ಬೆಳೆಸುತ್ತಾರೋ ಅಲ್ಲಿಯ ತನಕ ಚಿತ್ರರಂಗ ಯಾವುದೇ ಹಿನ್ನಡೆ ಇಲ್ಲದೆ ಮುಂದುವರೆಯುತ್ತದೆ ಎಂದು ಸಂಗೀತ ನಿರ್ದೇಶಕ, ಕಲಾವಿದ ಹಾಗೂ ಹಾಸ್ಯನಟ ಸಾಧುಕೋಕಿಲ ತಿಳಿಸಿದರು.





ಅವರು, ಖಾಸಗಿ ಕಾರ್ಯಕ್ರಮ ನಿಮಿತ್ತ ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಸೂರನಹಳ್ಳಿ ಗ್ರಾಮದ ಶ್ರೀವೆಂಕಟೇಶ್ವರ ಹಾಗೂ ಯಲ್ಲಮ್ಮ ದೇವಸ್ಥಾನಕ್ಕೆ ಭೇಟಿ ನೀಡಿ ದೇವಿಯ ದರ್ಶನ ಪಡೆದು ಪೂಜೆ ನೆರವೇರಿಸಿದ ನಂತರ ಗ್ರಾಮದ ಜನರನ್ನು ಉದ್ದೇಶಿಸಿ ಮಾತನಾಡಿದರು.

ಗ್ರಾಮಕ್ಕೆ ಆಗಮಿಸಿದ ಹಾಸ್ಯನಟ ಸಾಧುಕೋಕಿಲರವರಿಗೆ ಗ್ರಾಮದ ಜನರು ಆರತಿ ಬೆಳಕಿ ಭವ್ಯಸ್ವಾಗತಕೋರಿದರು. ಗ್ರಾಮದ ವೃದ್ದರು, ಮಕ್ಕಳು, ಮಹಿಳೆಯರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಾಧುಕೋಕಿಲರನ್ನು ಕಂಡು ಸಂಭ್ರಮಿಸಿದರು. ಇದೇ ಸಂದರ್ಭದಲ್ಲಿ ಹಲವಾರುಯುವಕರುಸಾಧುರವರೊಂದಿಗೆ ಸೇಲ್ಫಿ ಕ್ಲಿಕಿಸಿಕೊಂಡರು. ಜನರ ಪ್ರೀತಿ, ವಿಶ್ವಾಸವನ್ನು ಕಂಡು ಪುಳಕಿತರಾದ ಸಾಧುಕೋಕಿಲ ಜನರ ಪ್ರೀತಿವಿಶ್ವಾಸದ ಮುಂದೆ ಬೇರೆ ಎಲ್ಲಾ ವಿಷಯಗಳು ನಗಣ್ಯವೆಂದರು. ಇದೇ ಸಂದರ್ಭದಲ್ಲಿ ಖಾಸಗಿ ವಾಹಿನಿಯಲ್ಲಿ ಪ್ರಸಾರವಾಗುವ ಗಿಚಿಗಿಲಿಗಿಲಿ ಕಾರ್ಯಕ್ರಮದ ಬಗ್ಗೆಯೂ ಸಹ ಜನರು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮದ ಮುಖಂಡ ಹಾಗೂ ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಗ್ರಾಮಸ್ಥರ ಪರವಾಗಿ ಸಾಧುಕೋಕಿಲರನ್ನು ಸನ್ಮಾನಿಸಿ, ಅಭಿನಂದಿಸಿದರು. ನಿನ್ನೆಯಷ್ಟೇ ದೂರವಾಣಿಯಲ್ಲಿ ಮಾತನಾಡಿದ ಅವರು ಗ್ರಾಮದ ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ. ಕನ್ನಡ ಚಿತ್ರರಂಗದ ಹಲವಾರು ಆಯಾಮಗಳಲ್ಲಿ ದುಡಿದ್ದಾರೆ, ಸುಮಾರು 30 ವರ್ಷಗಳಿಗೂ ಹೆಚ್ಚು ಕಾಲ ಕನ್ನಡ ಚಿತ್ರರಂಗದ ಸೇವೆಯನ್ನು ಸಲ್ಲಿಸಿದ್ದಾರೆ,





## ಫಾಸ್ಟ್ ನ್ಯೂಸ್

### ಪ್ರತಿಯೊಬ್ಬರಿಗೂ ನಾಡು-ನುಡಿ ಬಗ್ಗೆ ತಿಳುವಳಿಕೆ ಅಗತ್ಯ


» ಮೊದಲ ಪುಟದಿಂದ

ನಾಡು-ನುಡಿಯ ಸುದೀರ್ಘ ಪರಂಪರೆಯ ಬಗ್ಗೆ ಪ್ರತಿಯೊಬ್ಬರಿಗೂ ತಿಳುವಳಿಕೆ ಅಗತ್ಯವಾಗಿದೆ ಎಂದು ತಹಸಿಲ್ದಾರ್ ತಿರುಪತಿ ಪಾಟೀಲ್ ಹೇಳಿದರು.

ತಾಲೂಕಿನ ಲಕ್ಕಿಹಳ್ಳಿ ಗೇಟ್ ಗೆ ಭಾನುವಾರ ಬಂದ ಕನ್ನಡ ಜ್ಯೋತಿ ರಥಯಾತ್ರೆಯನ್ನು ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ಪುರಸಭಾ ಸದಸ್ಯರು, ಸ್ಥಳೀಯ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಕನ್ನಡ ಪರ ಸಂಘಟನೆಗಳ ಹೋರಾಟಗಾರರು, ಸ್ತ್ರೀಶಕ್ತಿ ಸಂಘಗಳ ಸದಸ್ಯರು, ಶಿಕ್ಷಕರು, ವಿದ್ಯಾರ್ಥಿಗಳು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಮತ್ತು ಸಾರ್ವಜನಿಕರು ಅತ್ಯಂತ ಸಂಭ್ರಮ ಸಡಗರದಿಂದ ಅದ್ದೂರಿಯಾಗಿ ಸ್ವಾಗತಿಸಿದರು. ನಂತರ ಅಲ್ಲಿಂದ ಮಾಡದಕೆರೆ ಮಾರ್ಗವಾಗಿ ಹೊಸದುರ್ಗ ಪಟ್ಟಣಕ್ಕೆ ತಲುಪಿತು. ನಂತರ ಶ್ರೀರಾಂಪುರ ಮಾರ್ಗವಾಗಿ ಹುಳಿಯಾರ್ ಕಡೆಗೆ ಸಾಗಿತು. ರಥಯಾತ್ರೆಯ ನೇತೃತ್ವವಹಿಸಿ ಅವರು ಮಾತನಾಡಿದರು.

ಈ ವೇಳೆ ರಥಯಾತ್ರೆಯಲ್ಲಿ ತಾ.ಪಂ. ಇಒ ಸುನಿಲ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಓಂಕಾರಪ್ಪ, ಬಿಇಓ ಸೈಯದ್ ಮೋಸಿನ್, ಕನ್ನಡ ರಕ್ಷಣಾ ವೇದಿಕೆ ಅಧ್ಯಕ್ಷ ಲೋಕೇಶ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕಾಳಮ್ಮ, ಸಹಾಯಕ ಕೃಷಿ ನಿರ್ದೇಶಕ ಈಶ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ನೂರಾರು ಜನ ಸಾರ್ವಜನಿಕರಿದ್ದರು.

### ಮಹಾನಾಯಕ ದಲಿತ ಸೇನೆಯ ತಾಲ್ಲೂಕು ಅಧ್ಯಕ್ಷ ಮನು ಆಯ್ಕೆ



» ಚಳ್ಳಕೆರೆ

ದಲಿತ ಸಂಘಟನೆಗಳ ಕಾರ್ಯಚಟುವಟಿಕೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ಸಕ್ರಿಯಪಾತ್ರ ವಹಿಸುತ್ತಿರುವ ಮಹಾನಾಯಕ ದಲಿತ ಸೇನೆಯ ತಾಲ್ಲೂಕು ಅಧ್ಯಕ್ಷರನ್ನಾಗಿ ಟಿ.ಮನುರವರನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಕಾರ್ಯಾಧ್ಯಕ್ಷ ಕೆ.ಪೆನ್ನೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ರಾಜ್ಯಾಧ್ಯಕ್ಷ ಎ.ಮಂಜುನಾಥ ತಾಳಿಕೆರೆ, ರಾಜ್ಯ ಸಂಘಟನಾ ಕಾರ್ಯಾಧ್ಯಕ್ಷ ಕೆ.ಪಿ.ಶ್ರೀನಿವಾಸ್‌ಮೂರ್ತಿ ಮಾರ್ಗದರ್ಶನದಲ್ಲಿ ಆಯ್ಕೆ ಮಾಡಿದ್ದು, ನೂತನ ಅಧ್ಯಕ್ಷ ಮನುರವರು ಸಂಘಟನೆಯ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಸೂಚನೆ ನೀಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ನಾಗರಾಜು, ಪ್ರಧಾನ ಕಾರ್ಯದರ್ಶಿ ವಸಂತಕುಮಾರ್, ಸಂಘಟನಾ ಕಾರ್ಯದರ್ಶಿ ಆರ್.ನಾಗರಾಜು ಮುಂತಾದವರು ಉಪಸ್ಥಿತರಿದ್ದರು.

.

### 20 ರಂದು ತಿಂಗಳ ಸೊಬಗು ಸಾಂಸ್ಕೃತಿಕ ಕಾರ್ಯಕ್ರಮ

» ಬಳ್ಳಾರಿ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಸಾಂಸ್ಕೃತಿಕ ಸಮುಚ್ಛಯ ನಿರ್ವಹಣಾ ಸಮಿತಿ ವತಿಯಿಂದ ಕಲಾ ಪ್ರತಿಭೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಜುಲೈ 20 ರಂದು ಸಂಜೆ 6.30 ಗಂಟೆಗೆ ನಗರದ ನಾಡೋಜ ಸುಭದ್ರಮ್ಮ ಮನ್ಸೂರು ಬಯಲು ರಂಗಮಂದಿರ ಸಾಂಸ್ಕೃತಿಕ ಸಮುಚ್ಛಯದಲ್ಲಿ ತಿಂಗಳ ಸೊಬಗು ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಬಳ್ಳಾರಿಯ ಪ್ರಕಾಶ್ ಹೆಮ್ಮಾಡಿ ಅವರಿಂದ ಜಾನಪದ ಜಾದು ಕಾರ್ಯಕ್ರಮ ಮತ್ತು ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿಯ ಧಾತ್ರಿ ರಂಗ ಸಂಸ್ಥೆಯಿಂದ ಶ್ರೀ ಕೃಷ್ಣ ಸಂಧಾನ ಹಾಸ್ಯ ನಾಟಕ ಕಾರ್ಯಕ್ರಮ ಇರಲಿವೆ.

### ಡಯೇರಿಯಾ ನಿಯಂತ್ರಣ ಅಭಿಯಾನ

» ಬಳ್ಳಾರಿ

ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ ಡಯೇರಿಯಾ ಸಾಂಕ್ರಾಮಿಕ ರೋಗ ಹರಡುವಿಕೆ ತಡೆಗಟ್ಟುವ ಅಭಿಯಾನವನ್ನು ಜು.01 ರಿಂದ ಆಗಸ್ಟ್ 31ರ ವರೆಗೆ ಎರಡು ತಿಂಗಳ ಕಾಲ ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಂಪ್ಲಿ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ. ಅಶುಚಿತ್ವ, ಜನದಟ್ಟಣೆ, ಪ್ರಾಣಿಗಳೊಂದಿಗೆ ಒಡನಾಟ, ಕಲುಷಿತ ನೀರು, ಕೊಳಕು ಕೈ, ಮತ್ತು ಬ್ಯಾಕ್ಟೀರಿಯಾಗಳಿಂದ ಡಯೇರಿಯಾ ರೋಗವು ಹರಡಲಿದ್ದು, ಕಿಬ್ಬೊಟ್ಟೆಯ ಹೊಟ್ಟೆನೋವು, ಸೆಳೆತ, ವಾಕರಿಕೆ, ಜ್ವರ, ಭೇದಿ ಮುಂತಾದ ಲಕ್ಷಣಗಳು ಕಂಡುಬರುತ್ತದೆ. ಹಾಗಾಗಿ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

# ಸಿಎಂ ಸಿದ್ದರಾಮಯ್ಯಗೆ ಬೆನ್ನಿಗೆ ಇದೆ ದಲಿತ ಶಕ್ತಿ

## ಟೀಕೆ, ಆರೋಗಳಿಗೆ ಎದೆಗುಂದದಿರಿ: ಮಾಜಿ ಸಚಿವಎಚ್.ಆಂಜನೇಯಅಭಯ -ಆಂಜನೇಯಗೆ ಬೆಳ್ಳಿಗಧೆ ನೀಡಿ ಗೌರವ

» ಚಿತ್ರದುರ್ಗ





ಅಹಿಂದ ವರ್ಗದಕಣ್ಮಣಿ ಸಿದ್ದರಾಮಯ್ಯ ಐದು ವರ್ಷ ಮುಖ್ಯಮಂತ್ರಿಯಾಗಿ ನಿರ್ಭಯವಾಗಿಕಾರ್ಯನಿರ್ವಹಿಸಬೇಕು. ಈ ಕಾರ್ಯಕ್ಕೆಇಡೀದಲಿತ ಸಮುದಾಯ ನಿಮ್ಮೊಂದಿಗೆಇರಲಿದೆಎಂದು ಮಾಜಿ ಸಚಿವಎಚ್.ಆಂಜನೇಯ ಹೇಳಿದರು.

ಬೆಂಗಳೂರಿನಲ್ಲಿ ಶನಿವಾರರಾಜ್ಯ ಸರ್ಕಾರ ಹಮ್ಮಿಕೊಂಡಿದ್ದಡಾ.ಬಾಬು ಜಗಜೀವನರಾಮ್ ಭವನ ಲೋಕಾರ್ಪಣೆಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಸಿದ್ದರಾಮಯ್ಯ ಎರಡನೇ ಬಾರಿ ಮುಖ್ಯಮಂತ್ರಿಯಾಗಿಉತ್ತಮವಾಗಿ ಆಡಳಿತ ನಡೆಸುತ್ತಿರುವುದನ್ನು ಕೆಲ ಜನರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಆದ್ದರಿಂದಲೇಅಗತ್ಯವಾಗಿಟೀಕೆ, ಆರೋಪ ಮಾಡಿಎದೆಗುಂದಿಸುವ ಕೆಲಸ ಮಾಡುತ್ತಿದ್ದಾರೆಎಂದುದೂರಿದರು.

ನೊಂದವರು, ಬಡವರು, ಶೋಷಿತರು, ಅಹಿಂದವರ್ಗದಪ್ರಗತಿಗೆಯೋಜನೆಗಳನ್ನು ರೂಪಿಸಿರುವ ಕಾರಣಕ್ಕೆ ಹಾಗೂ ಎಲ್ಲ ವರ್ಗದಜನರು ಮೆಚ್ಚಿಕೊಳ್ಳುವ ರೀತಿ ಮಾದರಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ಅವರಕುರಿತು ಕೆಲವರಲ್ಲಿ ಸಹಜವಾಗಿಅಸೂಯೆಉಂಟಾಗಿದೆ. ಆದ್ದರಿಂದ ಸುಳ್ಳು ಆರೋಪಗಳಲ್ಲಿ ಕೆಲ ದುಷ್ಟ ಶಕ್ತಿಗಳು ತೊಡಗಿವೆಎಂದು ಆರೋಪಿಸಿದರು.

ಇಂತಹಯಾವುದೇ ಟೀಕೆಗಳಿಗೆ ಸಿದ್ದರಾಮಯ್ಯ ಎದೆಗುಂದಬೇಕಿಲ್ಲ. ನಮ್ಮ ಪರವಾಗಿ ಆಡಳಿತ ನಡೆಸುತ್ತಿರುವ ನಿಮ್ಮ ಬೆನ್ನಿಗೆದಲಿತಶಕ್ತಿಇದೆ.ತಾವುನಿರ್ಭಯವಾಗಿ ಮುನ್ನುಗ್ಗಿ.2013-18 ಅವಧಿಯಲ್ಲಿ ಸ್ವತಂತ್ರವಾಗಿ ಆಡಳಿತ ಮರುಕಳಿಸಲಿ.ಈ ನಿಮ್ಮಕಾರ್ಯಕ್ಕೆ ನಾವು ಸದಾ ಬೆಂಬಲವಾಗಿರುತ್ತೇವೆಎಂದುಅಭಯ ನೀಡಿದರು.

ಐದು ವರ್ಷಗಳ ಕಾಲ ನನ್ನನ್ನು ಸಮಾಜಕಲ್ಯಾಣ ಹಾಗೂ ಹಿಂದುಳಿದ ವರ್ಗದಖಾತೆ ಸಚಿವರಾಗಿ ಸ್ವತಂತ್ರವಾಗಿಕಾರ್ಯನಿರ್ಹಿಸಲು ಅವಕಾಶ ಕೊಟ್ಟಿದ್ದ ಸಿದ್ದರಾಮಯ್ಯ ಅವರ 2013-18 ಆಡಳಿತ ದಲಿತರ ಪಾಲಿಗೆ ಸುವರ್ಣಯುಗವಾಗಿತ್ತುಎಂದರು.

ಸಚಿವನಾಗಿ ಹಾಸ್ಟೆಲ್ ನಿರ್ಮಾಣ ಸೇರಿ ನೂರಾರುಜನಪರ ಕೆಲಸ ಮಾಡಿದ್ದೇನೆ. ಮುಖ್ಯವಾಗಿಡಾ.ಬಾಬು ಜಗಜೀವನರ ಇತ್ತತಿರುಗಿ ನೋಡುವರೀತಿ ನಿರ್ಮಾಣ ಮಾಡಲುಶ್ರಮಿಸಿದ್ದೇನೆ. ಇದಕ್ಕೆಲ ಬೆಂಬಲವಾಗಿ ನಿಂತಹವರು ಸಿದ್ದರಾಮಯ್ಯ ಎಂದು ಹೇಳಿದರು.

ಕರ್ನಾಟಕ ಸರ್ಕಾರದ ಪರವಾಗಿ ಮುಖ್ಯಮಂತ್ರಿಸಿದ್ದರಾಮಯ್ಯಆಂಜನೇಯ ಅವರನ್ನು ಸನ್ಮಾನಿಸಿದರು.ರಾಜ್ಯದ ವಿವಿಧದಲಿತ ಸಂಘಟನೆಗಳ ಮುಖಂಡರು ಬೆಳ್ಳಿಗಧೆ ನೀಡಿ ಗೌರವಿಸಿದರು.ಲೋಕಸಭಾ ಮಾಜಿಸ್ಪೀಕರ್ ಮೀರಾಕುಮಾರಿ, ಸಚಿವರಾದ ಎಚ್.ಸಿ.ಮಹಾದೇವಪ್ಪ, ಕೆ.ಎಚ್.ಮುನಿಯಪ್ಪ ಸೇರಿದಂತೆ ಅನೇಕ ಜನಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು ಉಪಸ್ಥಿತಿ ಇದ್ದರು.

**ಎಚ್.ಆಂಜನೇಯ ಶಕ್ತಿಪ್ರದರ್ಶನ:** ಬಾಬು ಜಗಜೀವನರಾಮ್ ಭವನ ನಿರ್ಮಾಣಕ್ಕೆ ಮೂಲ ಕಾರಣಕರ್ತರಾದಎಚ್. ಆಂಜನೇಯಅವರನ್ನು ಸಿದ್ದರಾಮಯ್ಯ ಹಾಗೂ ದಲಿತ ಮುಖಂಡರು ಸನ್ಮಾನಿಸುವ ಸಂದರ್ಭಎಚ್.ಆಂಜನೇಯ ಪರವಾಗಿ ಘೋಷಣೆಗಳು ಮೊಳಗಿದವು. ಮುಖ್ಯಮಂತ್ರಿಸಿದ್ದರಾಮಯ್ಯ ಸೇರಿ ಅನೇಕರುತಮ್ಮ ಭಾಷಣದಲ್ಲಿ ಆಂಜನೇಯ ಹೆಸರು ಹೇಳಿದಾಗಲೂ ನೆರೆದಿದ್ದಜನರು ಚಪ್ಪಾಳೆ ತಟ್ಟೆಅಭಿಮಾನ ವ್ಯಕ್ತಪಡಿಸಿದರು.

ರಾಜ್ಯದ ವಿವಿಧ ಭಾಗಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿದ್ದ ಜನರು, ಸಿದ್ದರಾಮಯ್ಯ, ಎಚ್.ಆಂಜನೇಯ ಅವರ ಭಾಷಣದ ವೇಳೆ ಚಪ್ಪಾಳೆ, ಘೋಷಣೆಗಳ ಮೂಲಕ ಅಭಿಮಾನ ವ್ಯಕ್ತಪಡಿಸಿದರು. ಇಡೀಕಾರ್ಯಕ್ರಮಆಂಜನೇಯ ಅವರು ಶಕ್ತಿಪ್ರದರ್ಶನ ನಡೆಸಿದಂತೆ ಭಾಸವಾಯಿತು.ಸೂಕ್ಷ್ಮವಾಗಿಜನರಅಭಿಮಾನಗಮನಿಸುತ್ತಿದ್ದ ಸಿದ್ದರಾಮಯ್ಯ ಅವರು ಪದೇ ಪದೆಆಂಜನೇಯಅವರತ್ತನೋಡಿ ಮೆಚ್ಚುಗೆ ರೀತಿ ಸ್ಮೈಲ್‌ಕೊಡುತ್ತಿದ್ದದೃಶ್ಯ ನೆರೆದಿದ್ದ ಜನರಉತ್ಸಾಹ ಇಮ್ಮಡಿಗೊಳಿಸಿತು.

## ಪ್ರಾಥಮಿಕ ಶಾಲಾ ಹಂತದಲ್ಲೇ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಶೈಕ್ಷಣಿಕ ಪ್ರಗತಿಗೆ ನಾಂದಿ: ಮಾರಣ್ಣ

» ಚಳ್ಳಕೆರೆ



ತಾಲ್ಲೂಕಿನ ತಳಕು ಹೋಬಳಿಯ ಹಿರೇಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಿರೇಹಳ್ಳಿ ಮತ್ತು ದೇವರೆಡ್ಡಿಹಳ್ಳಿ ಕ್ಲಸ್ಟರ್ ಮಟ್ಟದ 1ರಿಂದ3 ತರಗತಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಬೋಧನೆ ನೀಡುವ ಕುರಿತು ಚಿಂತನಾ ಸಭೆಯನ್ನು ನಡೆಸಲಾಯಿತು.

ಸಿಆರ್‌ಪಿ ಎನ್.ಮಾರಣ್ಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ, ಪ್ರಸ್ತುತ ಶೈಕ್ಷಣಿಕ ವರ್ಷ ಈಗಾಗಲೇ ಆರಂಭವಾಗಿ ಒಂದು ತಿಂಗಳು ಕಳೆದಿದ್ದು, ಶಾಲಾ ದಾಖಲಾತಿಗಳ ಅವಧಿ ಮುಕ್ತಾಯವಾಗಿ ಶಾಲೆಯಲ್ಲಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶಿಕ್ಷಕರು ಬೋಧನೆ ನೀಡುವ ಕುರಿತು ಹಲವಾರು ಅಂಶಗಳನ್ನು ಗಮನಿಸಬೇಕು.

ನಾಲ್ಕು ಗೋಡೆಗಳ ಮಧ್ಯೆ ನಡೆಯುವ ತರಗತಿಯಲ್ಲಿ ವಿದ್ಯಾರ್ಥಿಗಳ ಜ್ಞಾನವಿಕಾಸಕ್ಕೆ ಸೂಕ್ತವಿಚಾರಗಳನ್ನು ತಿಳಿಸಿ ಹೇಳಬೇಕು. ವಿಶೇಷವಾಗಿ ಗಣಿತ, ಕನ್ನಡ, ಇಂಗ್ಲಿಷ್, ಪರಿಸರ ಅಧ್ಯಯನ ವಿಷಯಗಳ ಬಗ್ಗೆ ಹೆಚ್ಚು ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ನೀಡಬೇಕು ಎಂದರು. ಸಂಪನ್ಮೂಲ ವ್ಯಕ್ತಿ ವಾಮಾಕ್ಷಿ ಮಾತನಾಡಿ, ಮಕ್ಕಳ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ(ಎಫ್‌ಎಲ್‌ಎನ್) ಕುರಿತು ಚರ್ಚಿಸಲು ಈ ಸಭೆಯನ್ನು ಆಯೋಜಿಸಿದ್ದು, ಸಿಆರ್‌ಪಿ ಮಾರಣ್ಣನವರು ಶಿಕ್ಷಕರಿಗೆ ಉಪಯುಕ್ತ ಮಾಹಿತಿಯನ್ನು ನೀಡಿದ್ದಾರೆ. ಶಿಕ್ಷಕರು ಎಲ್ಲಾ ಮಾಹಿತಿಯನ್ನು ಪ್ರತಿನಿತ್ಯದ ಬೋಧನೆಯಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ ಸುಜಾತಾ, ಶಿಕ್ಷಕರಾದ ಸೂರಣ್ಣ, ಮಂಜುಣ್ಣ, ಜಿ.ಟಿ.ಬಸವರಾಜು, ಹರೀಶ್, ವೆಂಕಟೇಶ್, ವೀರೇಶ್, ಪ್ರವೀಣ್‌ಕುಮಾರ್, ಗೋಪಿನಾಥ, ತಿಪ್ಪೇಸ್ವಾಮಿ, ಕೆ.ಮಹೇಶ್, ರವಿಕುಮಾರ್, ರಾಜೇಶ್ವರಿ, ನಿರ್ಮಲಮ್ಮ, ಮಂಜುಳ, ಬಡಮ್ಮ, ನಾಗರತ್ನಮ್ಮ, ತಿಪ್ಪಮ್ಮ, ಮಮತ, ಆಶಾ, ರುದ್ರಮ್ಮ ಮುಂತಾದವರು ಉಪಸ್ಥಿತರಿದ್ದರು.

## ಛಲವಾದಿ ನೂತನ ರಾಜ್ಯಾಧ್ಯಕ್ಷರಾದ ವಾಣಿ ಶಿವರಾಮ್‌ಗೆ ಸನ್ಮಾನ



» ಚಿತ್ರದುರ್ಗ

ಛಲವಾದಿ ಮಹಾಸಭೆ ಜಿಲ್ಲಾ ಸಮಿತಿಯಿಂದ ನೂತನ ರಾಜ್ಯಾಧ್ಯಕ್ಷರಾದ ವಾಣಿ ಕೆ ಶಿವರಾಮ್ ಅವರಿಗೆ ಸನ್ಮಾನ .ಮತ್ತು ಪ್ರತಿಭಾ ಪುರಸ್ಕಾರ ಹಾಗೂ ಛಲವಾದಿ ಮಹಾಸಭಾದ ಜಿಲ್ಲಾ ಸಮಿತಿಯ ಪದಗ್ರಹಣ ಕಾರ್ಯಕ್ರಮವನ್ನು ಚಿತ್ರದುರ್ಗದ ಸಿಬಾರದ ಛಲವಾದಿ ಗುರುಪೀಠದಲ್ಲಿ ಸಂವಿದಾನ ಪೀಠಿಕೆ ಓದುವುದರ ಮೂಲಕ ಉದ್ಘಾಟನೆ ಮಾಡಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ರಾಜ್ಯಾದ್ಯಕ್ಷೆ ವಾಣಿ ಕೆ ಶಿವರಾಮ್ ಅವರು ಛಲವಾದಿ ಮಹಾಸಭೆ ಯನ್ನು ಕೆ ಶಿವರಾಮ್ ಸ್ಥಾಪಿಸಿ. ಸಮುದಾಯದ ಏಳಿಗೆಗಾಗಿ ತುಂಬಾ ಶ್ರಮಪಟ್ಟ ಧೀಮಂತ ವ್ಯಕ್ತಿಯಾಗಿದ್ದರು.ಬುದ್ಧ ಬಸವ ಅಂಬೇಡ್ಕರ್ ಹಾದಿಯಲ್ಲೇ ಬಂದವರು. ತನ್ನ ಸಮುದಾಯಕ್ಕೋಸ್ಕರ ಹಗಲು ರಾತ್ರಿ ಕೆಲಸಕ್ಕೆ ಮುಡಿಪಾಗಿಟ್ಟ ವರು.ಆದರೆ ಅವರ ಅಕಾಲಿಕ ಮರಣದಿಂದ ನನಗೆ ಹಾಗೂ ನಮ್ಮ ಛಲವಾದಿ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ.ಅವರು ನನ್ನಂತೆಯೇ ನನ್ನವರು ಸಹ ಐಎಎಸ್. ಐಪಿಎಸ್. ಕೆಎಎಸ್.ಅಧಿಕಾರಿಗಳಾಗಬೇಕೆಂದು ಸಾಕಷ್ಟು ಕನಸುಗಳನ್ನು ಕಂಡಿದ್ದರು.ಕನಸುಗಳನ್ನು ನನಸಾಗಿಸಲು ನಾನು ಅವರ ಸ್ಥಾನ ತುಂಬಲು ಇಂದು ದೊಡ್ಡ ಜವಾಬ್ದಾರಿ ಹೊತ್ತಿದ್ದೇನೆ.ನಿಮ್ಮ ಸಹಕಾರ ಅತ್ಯಗತ್ಯ.ರಾಜ್ಯಾದ್ಯಂತ ಪ್ರವಾಸ ಮಾಡಿ ಮಹಾಸಭಾವನ್ನು ಮತ್ತಷ್ಟು ಛಲಗೊಳಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದರು.

ಶ್ರೀ ಬಸವನಾಗಿದೇವ ಶರಣರು ದಿವ್ಯ ಸಾನಿದ್ಯ ವಹಿಸಿದ್ದರು. ಅಧ್ಯಕ್ಷತೆಯನ್ನು ಹೆಚ್ .ಶೇಷಪ್ಪ.ಮುಖ್ಯ ಅತಿಥಿಗಳಾಗಿ ರಾಜ್ಯ ಖಜಾಂಚಿ ಮೈಕೋ ನಾಗರಾಜ್. ರಾಜ್ಯ ಜಂಟಿಕಾರ್ಯದರ್ಶಿ ನಾಗೇಶ್.ನಿರ್ದೇಶಕ ಶಿವಪ್ಪ. ಹೇಮಂತ್ ಕುಮಾರ್. ಗ್ರಾಮಪಂಚಾಯತಿ ಸದಸ್ಯ ಜಾನಕಲ್ ನಾಗರಾಜ್. ರಾಮಚಂದ್ರಪ್ಪ.ನರಸಿಂಹಮೂರ್ತಿ. ದೇವರಾಜ್ ಜಿಲ್ಲೆಯ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಜಿ.ಅಭಯ್ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ರಾಜ್ಯಮಟ್ಟದಲ್ಲಿ ತೃತೀಯ ಶ್ರೇಣಿ ಪಡೆದ ವಿದ್ಯಾರ್ಥಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು.

## ಎಂಓಬಿ ಪೆರೇಡ್‌ನಲ್ಲಿ ಆರೋಪಿಗಳಿಗೆ ಪಿಎಸ್‌ಐ ಎಚ್ಚರಿಕೆ

» ಪರಶುರಾಂಪುರ




ಸ್ಥಳೀಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವ ಕಳ್ಳತನ ಸೇರಿದಂತೆ ಇನ್ನಿತರ ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪಿಗಳ(ಎಂಓಬಿ) ಪರೇಡನ್ನು ಪೊಲೀಸ್ ಠಾಣೆಯ ಆವರಣದಲ್ಲಿ ನಡೆಸಲಾಯಿತು.

ಪರೇಡ್‌ನಲ್ಲಿ ಪಿಎಸ್‌ಐ ಬಸವರಾಜು ಮಾತನಾಡಿ, ಅಪರಾಧ ಚಟುವಟಿಕೆಗಳಿಂದ ದೂರ ಇರುವಂತೆ ತಿಳಿಹೇಳಿ ಅಪರಾಧ ಚಟುವಟಿಕೆಯಿಂದ ಸಮಾಜದಲ್ಲಿ ಉಂಟಾಗುವ ಅಶಾಂತಿ, ಕೌಟುಂಬಿಕ ಸಮಸ್ಯೆ, ಸಮಾಜದಲ್ಲಿ ಅಗೌರವ ಮುಂತಾದವುಗಳ ಕುರಿತು ಬುದ್ಧಿವಾದದ ಜತೆ ಖಡಕ್ ಸೂಚನೆ ನೀಡಿದರು.ಅಪರಾಧ ಜೀವನದಿಂದ ದೂರ ಸರಿದು,ಒಳ್ಳೆಯ ಜೀವನ ನಡೆಸಲು ತಿಳಿವಳಿಕೆ ನೀಡಲಾಯಿತು. ವಲಯದಲ್ಲಿ ಕಳ್ಳತನದ ಕೃತ್ಯಗಳು ನಡೆದಲ್ಲಿ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಪಿಗಳಿಗೆ ಎಚ್ಚರಿಕೆ ಕೂಡಾ ನೀಡಲಾಯಿತು ಎಂದು ಗ್ರೇಡ್-2 ಪಿಎಸ್‌ಐ ಮಾರುತಿ ತಿಳಿಸಿದರು.ಈ ವೇಳೆಯಲ್ಲಿ ಠಾಣೆಯ ಸಿಬ್ಬಂದಿ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಶಿಕ್ಷಣದ ಕಲಿಕೆಯಲ್ಲಿ ವಿಜ್ಞಾನದ ಪಾತ್ರವೇ ಹೆಚ್ಚು ಮಹತ್ವವುಳ್ಳದ್ದು

■ ಚಳ್ಳಕೆರೆ



ವಿಜ್ಞಾನದಿಂದ ಇಂದು ನಾವು ಜಗತ್ತನ್ನೇ ಗೆಲ್ಲಬಹುದಾಗಿದೆ. ಭಾರತೀಯರು ಈಗಾಗಲೇ ವಿಜ್ಞಾನವನ್ನು ಯುಗವನ್ನು ಪ್ರವೇಶಿಸಿ ಅನೇಕ ವರ್ಷಗಳೇ ಸಂದಿವೆ. ವಿಶೇಷವಾಗಿ ಶಿಕ್ಷಣದ ಕಲಿಕೆಯಲ್ಲಿ ವಿಜ್ಞಾನದ ಪಾತ್ರ ತುಂಬಾ ಮಹತ್ವದ್ದು. ಆದ್ದರಿಂದ ಪ್ರತಿಯೊಬ್ಬರೂ ವಿಜ್ಞಾನಕ್ಕೆ ಹೆಚ್ಚಿನ ಆದ್ಯತೆ ನೀಡಿ ವಿದ್ಯಾರ್ಥಿಗಳಿಗೆ ಭವಿಷ್ಯಕ್ಕೆ ಭದ್ರಬುನಾದಿಹಾಕಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಶನಿವಾರ ರೋಟರಿ ಬಾಲಭವನದಲ್ಲಿ ಚಿತ್ರದುರ್ಗ ಸೈನ್ಸ್ ಫೌಂಡೇಶನ್, ಶಿಕ್ಷಣ ಇಲಾಖೆ, ರೋಟರಿ ಕ್ಲಬ್, ಹೊಂಗಿರಣ ವಿದ್ಯಾ ಸಂಸ್ಥೆ ಹಾಗೂ ಚಳ್ಳಕೆರೆ ವಿಜ್ಞಾನ ಕ್ಲಬ್ ಸಹಯೋಗದಲ್ಲಿ ಪ್ರೌಢಶಾಲಾ ವಿಜ್ಞಾನ ಶಿಕ್ಷಕರಿಗಾಗಿ ಹಮ್ಮಿಕೊಂಡಿದ್ದ ವಿಜ್ಞಾನ ಉಪನ್ಯಾಸ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ವಿಜ್ಞಾನವೆಂಬುವುದು ಪ್ರತಿಯೊಬ್ಬ ವಿದ್ಯಾರ್ಥಿಗೂ ಜ್ಞಾನದ ಸಂಪತ್ತಾಗಿದೆ. ವಿದ್ಯಾರ್ಥಿಗಳಲ್ಲಿ ಅಡಗಿರುವ ಕೌಶಲ್ಯತೆಯನ್ನು ಗುರುತಿಸಲು ವಿಜ್ಞಾನ ಪ್ರಧಾನವಾಗಿದೆ.

ಪ್ರಾಸ್ತಾವಿಕವಾಗಿ ಮಾತನಾಡಿದ ಚಿತ್ರದುರ್ಗ ಸೈನ್ಸ್ ಫೌಂಡೇಷನ್‌ನ ಎಚ್.ಎಸ್.ಟಿ.ಸ್ವಾಮಿ, ಕಳೆದ ಹಲವಾರು ವರ್ಷಗಳಿಂದ ಚಿತ್ರದುರ್ಗ ಸೈನ್ಸ್‌ಫೌಂಡೇಷನ್ ನಗರ ಹಾಗೂ ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದಂತೆ ಸೂಕ್ತ ಮಾರ್ಗದರ್ಶನದೊಂದಿಗೆ ವಿಶೇಷ ಕಾರ್ಯಗಾರವನ್ನು ಸಹ ನಡೆಸಿಕೊಂಡು ಬಂದಿದೆ ಎಂದರು.

ಜೈವಿಕ ತಂತ್ರಜ್ಞಾನದಲ್ಲಿ ಸೂಕ್ಷ್ಮಾಣುವಿನಪಾತ್ರ ಕುರಿತು ಉಪನ್ಯಾಸ ನೀಡಿದ ಪ್ರಾಧ್ಯಾಪಕ ಡಾ.ಎಸ್.ಶಿಶುಪಾಲ, ವಿದ್ಯಾರ್ಥಿಗಳು ತಮ್ಮದೇಯಾದ ವಿಷಯದಲ್ಲಿ ಪರಿಣಿತಿಯನ್ನು ಹೊಂದಲು ಮುಂದಾಗುತ್ತಾರೆ. ಆದರೆ, ವಿಜ್ಞಾನ ವಿಷಯ ಬಂದಾಗ ಮಾತ್ರ ಎಲ್ಲರೂ ಆತಂಕಕ್ಕೀಡಾಗುತ್ತಾರೆ. ಕಾರಣ ಯಾವುದೇ ವಿಚಾರವನ್ನು ಪ್ರಸ್ತಾಪಿಸಿ ಸೂಕ್ತ ಮಾಹಿತಿ ನೀಡಲು ವಿಜ್ಞಾನದ ಅವಶ್ಯಕತೆ ಇದೆ. ವಿಜ್ಞಾನದಿಂದ ಮಾತ್ರ ನಾವು ಸಾಧನೆಯತ್ತ ಹೆಜ್ಜೆ ಇಡಬಹುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸೈನ್ಸ್ ಫೌಂಡೇಶನ್ ಅಧ್ಯಕ್ಷ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪ ವಹಿಸಿ ಮಾತನಾಡಿ, ಮಾನವ ಪರಿವರ್ತನೆಗೆ ಸುಗಮವಾದ ಹಾದಿ ಎಂದರೆ ಅದು ವಿಜ್ಞಾನದಿಂದ ಮಾತ್ರ. ವಿಜ್ಞಾನ ಇಂದು ಎಲ್ಲೆಡೆ ಆವರಿಸಿಕೊಂಡಿದೆ. ವಿಜ್ಞಾನ ವಿಷಯದಲ್ಲಿ ಮಾತ್ರ ವಿದ್ಯಾರ್ಥಿಗಳು ಸುಜ್ಞಾನಿಗಳಾಲು ಸಾಧ್ಯವೆಂದರು. ವಿಜ್ಞಾನ ವಿಷಯ ಪರಿವೀಕ್ಷಕ ಎಚ್.ಗೋವಿಂದಪ್ಪ, ನಿವೃತ್ತ ಪ್ರಾಧ್ಯಾಪಕ ಶಿವಲಿಂಗಪ್ಪ, ರೋಟರಿ ಕ್ಲಬ್ ಅಧ್ಯಕ್ಷ ಆರ್.ನಾಗೇಶ್, ಎಚ್. ಎಸ್.ನಾಗೇಶ್, ಕೆ.ವಿ.ನಾಗಲಿಂಗಾರೆಡ್ಡಿ, ವಿಜ್ಞಾನ ಕ್ಲಬ್ ಅಧ್ಯಕ್ಷ ಎನ್.ಬಸವರಾಜ್, ಎಚ್.ಮಂಜುನಾಥ, ನಾಗಭೂಷಣ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕ್ರೀಡಾ ವಿದ್ಯಾರ್ಥಿ ವೇತನಕ್ಕೆ ಅರ್ಜಿ

» **ಚಿತ್ರದುರ್ಗ**

2023-24ನೇ ಸಾಲಿನಲ್ಲಿ ಪ್ರತಿಭಾವಂತ ಮಾಧ್ಯಮಿಕ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.10,000/-ರಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿ ವೇತನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿ ವೇತನಕ್ಕಾಗಿ ಅರ್ಹ ಕ್ರೀಡಾಪಟುಗಳು ಇಲಾಖೆಯ ಅಧಿಕೃತ ಜಾಲತಾಣ https://sevasindhuservices.karnataka.gov.inಮೂಲಕ ಆನ್‌ಲೈನ್‌ನಲ್ಲಿ ಇದೇ ಜುಲೈ 20ರ ಒಳಗಾಗಿ ಅರ್ಜಿ ಸಲ್ಲಿಸಲು ತಿಳಿಸಿದೆ.**ಷರತ್ತುಗಳು** : ಅರ್ಜಿದಾರರು 2023-24 ನೇ ಸಾಲಿನಲ್ಲಿ ವಿದ್ಯಾರ್ಥಿಯಾಗಿದ್ದು, ಮಾಧ್ಯಮಿಕ ಅಥವಾ ಪ್ರೌಢಶಾಲೆಯಲ್ಲಿ (6 ರಿಂದ 10ನೇ ತರಗತಿಯಲ್ಲಿ) ಓದುತ್ತಿರಬೇಕು. ಅರ್ಜಿದಾರರು ರಾಜ್ಯ ಕ್ರೀಡಾ ಪ್ರಾಧಿಕಾರದಲ್ಲಿ ನೊಂದಾಯಿತವಾದ ಕ್ರೀಡಾ ಸಂಸ್ಥೆಗಳು 2023 ರ ಏಪ್ರಿಲ್ 1 ರಿಂದ 2024 ಮಾರ್ಚ್ 31 ರವರೆಗೆ ನಡೆಸಿದ ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿರಬೇಕು ಅಥವಾ ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿರಬೇಕು. ಅಂದರೆ 2023 ಏಪ್ರಿಲ್ ರಿಂದ 2024 ಮಾರ್ಚ್ 31 ರ ಅವಧಿಯಲ್ಲಿ ನಡೆದ ಕ್ರೀಡಾ ಕೂಟಗಳಲ್ಲಿನ ಸಾಧನೆಯನ್ನು ಮಾತ್ರ ಪರಿಗಣಿಸಲಾಗುವುದು.ರಾಷ್ಟ್ರೀಯ ಖೇಲೋ ಇಂಡಿಯಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದಂತಹ ಕ್ರೀಡಾಟುಗಳು ಹಾಗೂ ರಾಷ್ಟ್ರೀಯ ಶಾಲಾ ಕ್ರೀಡಾ ಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದು. ಒಬ್ಬ ಕ್ರೀಡಾಪಟು ಒಂದಕ್ಕಿಂತ ಹೆಚ್ಚು ಕ್ರೀಡೆಗಳಲ್ಲಿ ಭಾಗವಹಿಸಿದ್ದರೂ ಸಹ ವಾರ್ಷಿಕ ಒಂದೇ ಕ್ರೀಡಾ ವೇತನ ಮೊತ್ತಕ್ಕೆ ಅರ್ಹರಾಗಿರುತ್ತಾರೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.10,000/- ಮಾತ್ರ ಮಂಜೂರು ಮಾಡಲಾಗುವುದು.

### ಅಗ್ನಿವೀರ ವಾಯುಸೇವೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಭಾರತ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ಸಹಾಯಕ ಸೆಕ್ಷನ್ ಆಫೀಸರ್, ಲೆಕ್ಕ ಪರಿಶೋಧನಾ ಅಧಿಕಾರಿ, ಲೆಕ್ಕಪತ್ರ ಅಧಿಕಾರಿ, ಆದಾಯ ತೆರಿಗೆ, ಕೇಂದ್ರ ಅಬಕಾರಿ ಮತ್ತು ಸಿಬಿಐನಲ್ಲಿ ಇನ್‌ಸ್ಪೆಕ್ಟರ್, ಇಡಿ ನಲ್ಲಿ ಎಇಓ ಮತ್ತು ಸಿಬಿಐನಲ್ಲಿ ಸಬ್ ಇನ್ಸ್ಪೆಕ್ಟರ್, ಅಂಚೆ ಇಲಾಖೆಯಲ್ಲಿ ಇನ್ಸ್ಪೆಕ್ಟರ್ ಹಿರಿಯ ಸೆಕ್ರೆಟರಿಯೇಟ್ ಸಹಾಯಕ, ಅಪ್ಪರ್ ಡಿವಿಜನ್ ಗುಮಾಸ್ತ, ಅಂಚೆ ಇಲಾಖೆ ಸಹಾಯಕ ಮತ್ತು ವಿಂಗಡಣೆ ಸಹಾಯಕ ಹುದ್ದಗಳಿಗೆ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಇದೇ ಜುಲೈ 24 ಕೊನೆಯ ದಿನವಾಗಿದೆ. ಅರ್ಜಿ ಸಲ್ಲಿಸುವವರು ಮಾನ್ಯತೆ ಪಡೆದ ವಿಶ್ವ ವಿದ್ಯಾಲಯದಿಂದ ಪದವಿ ಹೊಂದಿದ್ದು, ಕನಿಷ್ಠ 18 ರಿಂದ 32 ವರ್ಷಗಳು ವಯೋಮಿತಿ ಹೊಂದಿರಬೇಕು. ಈ ಎಲ್ಲ ಹುದ್ದೆಗಳಿಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗದ ವೆಬ್‌ಸೈಟ್ www.ssckkr.kar.nic.in/ https://ss.nic.in ಗೆ ಭೇಟಿ ನೀಡಬಹುದು. ಸಿಬ್ಬಂದಿ ಆಯೋಗದ ದೂರವಾಣಿ ಸಂಖ್ಯೆ: 080-25502520, 948362020. ಸಂಪರ್ಕಿಸಬಹುದು. ಕೇಂದ್ರ ಸರ್ಕಾರದ ಅಗ್ನಿಪಥ್ ಯೋಜನೆಯಡಿ ಅಗ್ನಿವೀರ್ ವಾಯು ಸೇವೆಗೆ (02/2025) ಆಯ್ಕೆ ಪರೀಕ್ಷೆಗಾಗಿ ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ಜುಲೈ 28 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮತ್ತು ಆನ್ಲೈನ್ ನೊಂದಣಿಗಾಗಿ http://agbipathvayu.cda.in ಹಾಗೂ http://careerindianairforce.cdac.in ಭೇಟಿ ನೀಡಬಹುದು. ಈ ನೇಮಕಾತಿಗಳ ಕುರಿತು ಮಾಹಿತಿಗಾಗಿ ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಂಪರ್ಕಿಸಬಹುದು

### ಜೋಗ್‌ಫಾಲ್ಸ್‌ಗೆ ವೇಗದೂತ ಸಾರಿಗೆ ಬಸ್


» **ಹಾವೇರಿ**

ಪ್ರಸ್ತುತ ಮಳೆಗಾಲ ಪ್ರಾರಂಭವಾಗಿದ್ದು, ವಿಶ್ವ ಪ್ರಸಿದ್ಧ ಪ್ರೇಕ್ಷಣೀಯ ಸ್ಥಳವಾದ ಜೋಗ್‌ಫಾಲ್ಸ್ ವೀಕ್ಷಣೆಗೆ ತೆರಳುವವರಿಗೆ ಪ್ರತಿ ರವಿವಾರ ಹಾಗೂ ರಜಾ ದಿನಗಳಂದು ಇದೇ ಜುಲೈ 14 ರಿಂದ ರಾಣೆಬೆನ್ನೂರು ಹಾಗೂ ಹಾವೇರಿಯಿಂದ ಜೋಗ್‌ಫಾಲ್ಸ್‌ಗೆ ವಿಶೇಷ ವೇಗದೂತ ಬಸ್‌ಗಳ ಕಾರ್ಯಾಚರಣೆ ಆರಂಭಿಸಲು ಉದ್ದೇಶಿಸಲಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾವೇರಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.ಹಾವೇರಿಯಿಂದ ಜೋಗ್‌ಫಾಲ್ಸ್‌ಗೆ ಬೆಳಿಗ್ಗೆ 8 ಗಂಟೆಗೆ ಶಿರಸಿ, ಸಿದ್ದಾಪುರ ಮಾರ್ಗವಾಗಿ ಶಿರಸಿಯ ಶ್ರೀ ಮಾರಿಕಾಂಬಾ ದೇವಿಯ ದರ್ಶನ ಮಾಡಿಸಿಕೊಂಡು ಜೋಗ್‌ಫಾಲ್ಸ್‌ಗೆ ತೆರಳಲಾಗುತ್ತದೆ. ಪುನಃ ಜೋಗ್ ಫಾಲ್ಸ್‌ನಿಂದ ಸಾಯಂಕಾಲ 4 ಗಂಟೆಗೆ ಹೊರಟು, ಹಾವೇರಿಗೆ ಸಾಯಂಕಾಲ 7.30 ಕ್ಕೆ ತಲುಪುವುದು. ಜೋಗ್ ಫಾಲ್ಸ್ ವೀಕ್ಷಣೆಗೆ 4 ಗಂಟೆಗಳ ಕಾಲಾವಕಾಶ ಇರುತ್ತದೆ. ರಾಣೇಬೆನ್ನೂರಿನಿಂದ ಜೋಗ್‌ಫಾಲ್ಸ್‌ಗೆ ಬೆಳಿಗ್ಗೆ 8 ಗಂಟೆಗೆ ಹಿರೇಕೇರೂರು, ಶಿರಾಳಕೊಪ್ಪ, ಸೊರಬ, ಸಿದ್ದಾಪುರ ಮಾರ್ಗವಾಗಿ ಕಾರ್ಯಾಚರಣೆ ಮಾಡಲಾಗುತ್ತದೆ. ಪುನಃ ಜೋಗ್ ಫಾಲ್ಸ್‌ನಿಂದ ಸಾಯಂಕಾಲ 04 ಗಂಟೆಗೆ ಹೊರಟು, ರಾಣೇಬೆನ್ನೂರಿಗೆ ಸಾಯಂಕಾಲ 7.30ಕ್ಕೆ ತಲುಪುವುದು. ಜೋಗ್ ಫಾಲ್ಸ್ ವೀಕ್ಷಣೆಗೆ 4-30 ಗಂಟೆಗಳ ಕಾಲಾವಕಾಶ ಇರುತ್ತದೆ.

**ಪತ್ರಿಕಾ ದಿನಾಚರಣೆಯಲ್ಲಿ ಸಚಿವ ಡಿ.ಸುಧಾಕರ್ ಹೇಳಿಕೆ**

# ಸತ್ಯಕ್ಕೆ ಹತ್ತಿರವಾದ ಸುದ್ದಿಗಳಿಗೆ ಮಾತ್ರ ಜನಮನ್ನಣೆ

» **ಚಿತ್ರದುರ್ಗ**




ಪತ್ರಿಕೆ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಕಟವಾಗುವ ಸತ್ಯಕ್ಕೆ ಹತ್ತಿರವಾದ ಸುದ್ದಿಗಳಿಗೆ ಮಾತ್ರ ಜನಮನ್ನಣೆ ದೊರಕುವುದು ಎಂದು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಸಂಯುಕ್ತಾಶ್ರಯದಲ್ಲಿ, ನಗರದ ಜಿಲ್ಲಾ ಪಂಚಾಯತ್ ಮುಖ್ಯ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಳ್ಳಲಾದ "ಪತ್ರಿಕಾ ದಿನಾಚರಣೆ" ಉದ್ಘಾಟಿಸಿ ಅವರು ಮಾತನಾಡಿದರು.

ಮಾಧ್ಯಮಗಳು ಜನರ ವಿಶ್ವಾಸಕ್ಕೆ ಹತ್ತಿರವಾಗಬೇಕು. ಜನರು ಮಾಧ್ಯಮಗಳನ್ನು ಅತಿ ಸೂಕ್ಷ್ಮವಾಗಿ ಗಮನಿಸುತ್ತಾರೆ. ಜನಸಾಮಾನ್ಯರಲ್ಲಿ ಇಂದು ಟಿ.ವಿ ಹಾಗೂ ಪತ್ರಿಕೆಗಳ ಸುದ್ದಿಗಳನ್ನು ಅನುಮಾನದ ದೃಷ್ಟಿಯಿಂದ ನೋಡುವ ಪರಿಸ್ಥಿತಿ ಉಂಟಾಗಿದೆ. ಮಾಧ್ಯಮಗಳಲ್ಲಿ ಪ್ರಕಟವಾಗುವುದು ಸುಳ್ಳು ಎನ್ನುವ ಭಾವನೆ ಜನರಲ್ಲಿ ಮೂಡುತ್ತಿರುವುದು ಆತಂಕಕಾರಿಯಾಗಿದೆ. ಮುಖ್ಯ ವಾಹಿನಿಯ ಮಾಧ್ಯಮಗಳ ಜೊತೆಗೆ, ಸಾಮಾಜಿಕ ಮಾಧ್ಯಮಗಳು, ಯೂಟ್ಯೂಬ್‌ಗಳಲ್ಲಿಯೂ ಸುದ್ದಿಗಳ ಪ್ರಸಾರವಾಗುತ್ತಿದೆ. ಇವು ಮುಖ್ಯ ವಾಹಿನಿಯ ಮಾಧ್ಯಮಗಳಿಗೆ ಸಮಾನಾಂತರವಾಗಿ ಕಾರ್ಯ ನಿರ್ವಹಿಸುತ್ತಿವೆ. ಬದಲಾದ ಈ ಪರಿಸ್ಥಿತಿಯಿಂದ ಟಿ.ವಿ ಹಾಗೂ ಪತ್ರಿಕಾ ಮಾಧ್ಯಮಗಳು ಹೊರಬರಬೇಕು. ವಸ್ತುನಿಷ್ಠ, ನಿಖರ ಹಾಗೂ ಸತ್ಯವಾದ ಸುದ್ದಿಗಳನ್ನು ಪ್ರಕಟಿಸುವ ಮೂಲಕ ಜನರ ನಂಬಿಕೆ ಗಳಿಸಬೇಕು. ಪತ್ರಿಕೆ ಮತ್ತು ಮಾಧ್ಯಮ ಪ್ರಜಾಪ್ರಭುತ್ವ ಹಾಗೂ ಸಮಾಜದಲ್ಲಿ ಬಹಳ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಸಚಿವ ಡಿ.ಸುಧಾಕರ್ ಅಭಿಪ್ರಾಯ ವ್ಯಕ್ತ ಪಡಿಸಿದರು.

ಜಿಲ್ಲೆಯಕಾರ್ಯನಿರತಪತ್ರಕರ್ತರಸಂಘ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಜಿಲ್ಲೆಯ ಅಭಿವೃದ್ಧಿ ಬಗ್ಗೆ ಪತ್ರಕರ್ತರು ಕಾಳಜಿ ಹೊಂದಿದ್ದಾರೆ. ಜಿಲ್ಲೆಯ ಪತ್ರಕರ್ತರಿಗೆ ಅಗತ್ಯವಾಗಿರುವ ನಿವೇಶನ ಮಂಜೂರಾತಿ ಮಾಡಲು ಸ್ಥಳ ಗುರುತಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದೇನೆ. ಸಚಿವನಾಗಿ ಕಾರ್ಯನಿರ್ವಹಿಸುವ ಅವಧಿಯಲ್ಲಿಯೇ ನಿವೇಶನ ಹಂಚಿಕೆ ಪೂರ್ಣಗೊಳಿಸುವುದಾಗಿ ಸಚಿವ ಡಿ.ಸುಧಾಕರ್ ಭರವಸೆ ನೀಡಿದರು.

ಸಂಸದ ಗೋವಿಂದ ಎಂ.ಕಾರಜೋಳ ಮಾತನಾಡಿ, ಪತ್ರಿಕೆಗಳು ಸಮಾಜದ ಪ್ರತಿಬಿಂಬ ಹಾಗೂ ಪ್ರಜಾಪ್ರಭುತ್ವದ ರಕ್ಷಾ ಕವಚವಾಗಿ ಕಾರ್ಯನಿರ್ವಹಿಸುತ್ತಿವೆ. ಸ್ವಾತಂತ್ರ್ಯ ಹೋರಾಟದಲ್ಲಿ ಪತ್ರಿಕೆಗಳು ಪ್ರಮುಖ ಪಾತ್ರ ವಹಿಸಿವೆ. ಕನ್ನಡ ನಾಡಿನ ಮೊದಲ ಪತ್ರಿಕೆ ಮಂಗಳೂರು ಸಮಾಚಾರ ಪತ್ರಿಕೆಯನ್ನು 1843 ಜುಲೈ 1 ರಂದು ಪಾದ್ರಿ ಹರ್ಮನ್ ಮೋಗ್ಲಿಂಗ್ ಅವರು ಪ್ರಾರಂಭಿಸಿದರು. ಗೋಪಾಲಕೃಷ್ಣ ಗೋಖಲೆ ಹಾಗೂ ಬಾಲಗಂಗಾಧರ ತಿಲಕ್ ಬ್ರಿಟಿಷರ ದುರಾಡಳಿತ, ಬ್ರಿಟಿಷರು ಜನರಿಗೆ ಮಾಡುತ್ತಿರುವ ಶೋಷಣೆಯನ್ನು ಪತ್ರಿಕೆಗಳ ಮೂಲಕ ಜನರಿಗೆ ತಿಳಿಸಿದರು. ಸ್ವಾತಂತ್ರ್ಯ ಹೋರಾಟದಲ್ಲಿ ಧುಮುಕಿದ ಮಹಾತ್ಮ ಗಾಂಧೀಜಿ "ಯಂಗ್ ಇಂಡಿಯಾ" ಹಾಗೂ "ಹರಿಜನ" ಪತ್ರಿಕೆಗಳನ್ನು ಆರಂಭಿಸಿದರು. ಇದರ ಜೊತೆಗೆ ಪ್ರಾದೇಶಿಕ ಭಾಷೆಗಳಲ್ಲಿ ಪತ್ರಿಕೆ ಆರಂಭಿಸಿದರು. ಅಂಬೇಡ್ಕರ್ ಸಹ "ಮೂಕನಾಯಕ" ಹಾಗೂ "ಬಹಿಷ್ಕೃತ ಸಮಾಜ" ಪತ್ರಿಕೆಗಳ ಮೂಲಕ ದೀನ ದಲಿತರನ್ನು ಸಂಘಟಿಸಿ ಅಭಿವೃದ್ಧಿ ಪಥದ ಕಡೆಗೆ ಮುನ್ನಡಿಸಿದರು. ಸ್ವಾತಂತ್ರ್ಯ ನಂತರ ಮಾಜಿ ಪ್ರಧಾನಿ ನೆಹರು ಅವರ ಮೊದಲ ಸಚಿವ ಸಂಪುಟದಲ್ಲಿ ಖ್ಯಾತ ಪತ್ರಕರ್ತ ರಂಗರಾವ್ ದಿವಾಕರ್ ಸಹಿತ ಒಬ್ಬರು ಆಗಿದ್ದರು. ರಾಜ್ಯದಿಂದ ಸಂಸದರಾಗಿ ಆಯ್ಕೆಯಾಗಿದ್ದ ಪಾಟೀಲ್ ಪುಟ್ಟಪ್ಪನವರು ಸಹ ವಿಶ್ವವಾಣಿ ದಿನಪತ್ರಿಕೆ ಹಾಗೂ ಪ್ರಪಂಚ ಎನ್ನುವ ವಾರ ಪತ್ರಿಕೆಗಳ ಸಂಪಾದಕರಾಗಿದ್ದರು. ಇಂದು ಪತ್ರಿಕೆ ಓದುವ ಹವ್ಯಾಸ ಕಡಿಮೆಯಾಗಿದೆ. ಟಿವಿ ಮಾಧ್ಯಮಗಳು ಹೆಚ್ಚಿನ ಪರಿಣಾಮ ಬೀರುತ್ತಿವೆ. ಇಂದಿನ ಮಕ್ಕಳಿಗೆ ಟಿವಿ ಮಾಧ್ಯಮಗಳೇ ಮೊದಲ ಪಾಠಶಾಲೆ ಎನ್ನುವಂತಾಗಿದೆ. ಮಾಧ್ಯಮಗಳ ಹೆಚ್ಚಿನ ಪ್ರಭಾವ ಬೀರುವ ಶಕ್ತಿ ಹೊಂದಿದ್ದು, ಇದು ಸಮಾಜದ ಏಳಿಗೆ ಬಳಕೆಯಾಗಲಿ ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

**ಮಾಧ್ಯಮಗಳಿಗೆ ಕಳಂಕ ತರುವ ಭ್ರಷ್ಟರನ್ನು ದೂರವಿಡಿ:** ಪತ್ರಿಕಾ ದಿನಾಚರಣೆಯಲ್ಲಿ ಕನ್ನಡಪ್ರಭ ಹಾಗೂ ಏಷ್ಯಾನೆಟ್ ಸುವರ್ಣ ನ್ಯೂಸ್ ಪ್ರಧಾನ ಸಂಪಾದಕ ರವಿ ಹೆಗಡೆ ದಿಕ್ಸೂಚಿ ಭಾಷಣ ಮಾಡಿ, ಪ್ರಸಕ್ತ ಸಮಾಜದಲ್ಲಿ ಮಾಧ್ಯಮ ಎನ್ನುವುದು ಭ್ರಷ್ಟಾಚಾರ ಮಾಡಲು ಸಲಕರಣೆಯಾಗಿ ಬಳಕೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಮಾಧ್ಯಮಗಳಿಗೆ ಕಳಂಕ ತರುವ ಭ್ರಷ್ಟರು ನಮ್ಮ ನಡುವೆಯೇ ಇದ್ದಾರೆ. ಇಂತಹವರನ್ನು ಹುಡುಕಿ ಸಮಾಜದ ಎದುರು ಬಯಲು ಮಾಡಬೇಕು ಎಂದರು. ಜುಲೈ ಒಂದನೇ ತಾರೀಖನ್ನು ಪತ್ರಿಕಾ ದಿನಾಚರಣೆ ಎನ್ನುವ ಬದಲು ಮಾಧ್ಯಮ ದಿನಾಚರಣೆ ಎಂದು ಕರೆದರೆ ಹೆಚ್ಚು ಅರ್ಥಪೂರ್ಣ ಎನಿಸುತ್ತದೆ. ಏಕೆಂದರೆ ಮೊದಲ ಪತ್ರಿಕೆ ಪ್ರಾರಂಭವಾದ ದಿನಗಳಲ್ಲಿ ಮುದ್ರಣ ಮಾಧ್ಯಮ ಅಸ್ತಿತ್ವದಲ್ಲಿತ್ತು. ಆದರೆ ಈಗ ಟಿ.ವಿ. ಮಾಧ್ಯಮ ಹಾಗೂ ಡಿಜಿಟಲ್ ಮಾಧ್ಯಮವೂ ಕೂಡ ಅಸ್ತಿತ್ವದಲ್ಲಿರುವುದರಿಂದ, ಮಾಧ್ಯಮ ದಿನಾಚರಣೆ ಎನ್ನುವುದು ಸೂಕ್ತ. ಈ ದಿನವನ್ನು ಆತ್ಮಾವಲೋಕ ದಿನವಾಗಿ ಆಚರಿಸಬೇಕು. ವೃತ್ತಿಪರತೆಯನ್ನು ಅಳವಡಿಸಕೊಳ್ಳುವ ಮೂಲಕ ಸಮಾಜವನ್ನು ಸರಿದಾರಿಯಲ್ಲಿ ತರಲು ಪ್ರಯತ್ನಿಸಬೇಕು ಎಂದರು.

ಮಾಧ್ಯಮಗಳಲ್ಲಿಂದು ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ವಸೂಲಿ ದಂದೆ ನಡೆಯುತ್ತಿದೆ. ಭ್ರಷ್ಟಾಚಾರಾದ ಕುರಿತು ಪ್ರಕಟವಾದ ಸುದ್ದಿಗಳಿಗಿಂತ, ಪ್ರಕಟವಾಗದೇ ಮುಚ್ಚಿ ಹೋಗುವ ಭ್ರಷ್ಟಾಚಾರದ ಸುದ್ದಿಗಳ ಬಗ್ಗೆ ಹೆಚ್ಚು ಯೋಚಿಸುವ ಅನಿವಾರ್ಯತೆಯಿದೆ. ಮಾಧ್ಯಮಗಳಿಗೆ ಕಳಂಕ ತರುವ ಭ್ರಷ್ಟರನ್ನು ಖಂಡಿಸಬೇಕು. ಪತ್ರಕರ್ತರ ಸಂಘಗಳು ಇಂತಹವರಿಗೆ ಮನ್ನಣೆ ನೀಡಬಾರದು ಎಂದು ರವಿ ಹೆಗಡೆ ಹೇಳಿದರು.

ಸರ್ಕಾರಗಳನ್ನು ಸರಿದಾರಿಗೆ ತರುವ ಶಕ್ತಿ ಮಾಧ್ಯಮಗಳಿಗಿದೆ. ಹಗರಣಗಳನ್ನು ಬಯಲಿಗೆ ಎಳೆಯುವ ಮೂಲಕ ಭ್ರಷ್ಟಾಚಾರನ್ನು ತಡೆಗಟ್ಟಬಹುದು. ರಾಜ್ಯದಲ್ಲಿ ನಡೆದ ಪಿ.ಎಸ್.ಐ ನೇಮಕಾತಿ ಹಗರಣವನ್ನು ಮಾಧ್ಯಮಗಳು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ದದವು. ಇದರಲ್ಲಿ ಉನ್ನತ ಅಧಿಕಾರಿಗಳು ಸೇರಿದಂತೆ 100 ಕ್ಕೂ ಹೆಚ್ಚು ಜನರ ಬಂಧನವಾಯಿತು ಎಂದರು.

**ಮಾಧ್ಯಮಗಳ ಮೂಲಕ ಸಾಮಾಜಿಕ ನ್ಯಾಯ ಹಾಗೂ ಬದಲಾವಣೆ** : ಕಾರ್ಯಕ್ರಮದಲ್ಲಿ ಪತ್ರಕರ್ತರು, ಸಂವಿಧಾನ ಮತ್ತು ಸಾಮಾಜಿಕ ನ್ಯಾಯ ಎಂಬ ವಿಷಯದ ಕುರಿತು ಕವಿ ಹಾಗೂ ಜನಪರ ಹೋರಾಟಗಾರ ಬಂಜೆಗೆರೆ ಜಯಪ್ರಕಾಶ್ ಮಾತನಾಡಿ, ಬ್ರಿಟೀಷರಿಂದ ಸ್ವಾತಂತ್ರ ಪಡೆದ ನಂತರ ದೇಶದಲ್ಲಿ ಸಾಮಾಜಿಕ ನ್ಯಾಯ ಹಾಗೂ ಬದಲಾವಣೆ ತರುವ ನಿಟ್ಟಿನಲ್ಲಿ ಸಂವಿಧಾನ ರಚನೆ ಮಾಡಲಾಯಿತು. ಆ ನಂತರದಲ್ಲಿ ದೇಶ ಆಳಿದ ಎಲ್ಲಾ ಸರ್ಕಾರಗಳು ಜನರಿಗೆ ಸಾಮಾಜಿಕ ನ್ಯಾಯ ಒದಗಿಸಿ ಹಾಗೂ ಬದಲಾವಣೆ ತರುವಂತೆ ಮಾಡುವಲ್ಲಿ ಮಾಧ್ಯಮಗಳ ಪಾತ್ರ ಪ್ರಮುಖವಾಗಿದೆ ಎಂದರು.ಖ್ಯಾತ ಲೇಖಕ ಡಾ.ಬಾಲಗೋಪಾಲರಾವ್ ಅವರು ದೇಶದಲ್ಲಿ ಸಾಮಾಜಿಕ ತತ್ವಗಳನ್ನು ಬಿತ್ತುವಲ್ಲಿ, ಸಮಾಜದಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ ಪತ್ರಿಕೆ ಹಾಗೂ ಮಾಧ್ಯಮಗಳು ವಹಿಸಿದ ಪಾತ್ರದ ಕುರಿತು ಕೃತಿ ರಚಿಸಿದ್ದಾರೆ. ಇದರ ಕನ್ನಡ ಅನುವಾದವನ್ನು ಸ್ವತಃ ನಾನೇ ಮಾಡಿದ್ದು, ಸದ್ಯದಲ್ಲಿಯೇ ಕೃತಿ ಬಿಡುಗಡೆಯಾಗಲಿದೆ ಎಂದರು.

ನಾಡಿನಲ್ಲಿ ಜನಪರ, ರೈತ ಹಾಗೂ ಪರಿಸರ ರಕ್ಷಣೆ ಹೋರಾಟಗಳಲ್ಲಿ ಪತ್ರಿಕೆಗಳು ಹಾಗೂ ಪತ್ರಕರ್ತರ ಪಾತ್ರ ದೊಡ್ಡದಿದೆ. ಸಾಮಾಜಿಕ ಹೋರಾಟಗಾರಿಗೆ ಬೆನ್ನೆಲುಬಾಗಿ ನಿಂತು ಪತ್ರಕರ್ತರು ಕಾರ್ಯನಿರ್ವಹಿಸುತ್ತಾರೆ. ಬಹಳಷ್ಟು ವಿಷಯಗಳು ಪತ್ರಕರ್ತರ ಮೂಲಕವೇ ಸಾಮಾಜಿಕ ಹೋರಾಟಗಾರರಿಗೆ ತಲುಪುತ್ತವೆ. ಸರ್ಕಾರದ ನೀತಿ ನಿರೂಪಣೆಗಳ ಬಗ್ಗೆ ಜನರಿಗೆ ಮುಂಚಿತವಾಗಿ ಜಾಗೃತಗೊಳಿಸುವ ಕಾರ್ಯವನ್ನು ಮಾಧ್ಯಮಗಳು ಮಾಡುತ್ತಾ ಬಂದಿವೆ ಎಂದು ಬಂಜೆಗೆರೆ ಜಯಪ್ರಕಾಶ್ ಹೇಳಿದರು.

**ಕಾರ್ಯನಿರತ ಪತ್ರಕರ್ತ ಸಂಘಕ್ಕೆ ರೂ.5 ಲಕ್ಷ ಅನುದಾನ** : ವಿಧಾನಪರಿಷತ್ ಶಾಸಕ ಕೆ.ಎಸ್.ನವೀನ್ ಮಾತನಾಡಿ, ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಅಗತ್ಯ ಇರುವ ಸಲಕರಣೆಗಳನ್ನು ನೀಡಲು ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಡಿ ರೂ.5 ಲಕ್ಷ ಅನುದಾನ ಮಂಜೂರು ಮಾಡಿರುವುದಾಗಿ ತಿಳಿಸಿದರು. ಇದರೊಂದಿಗೆ ಜಿಲ್ಲೆಯ 157 ಪತ್ರಿಕಾ ವಿತರಕರಿಗೆ ರೇಡಿಯಂ ಸ್ಟಿಕರ್ ರಿಫ್ಲೆಕ್ಟರ್ ಹೊಂದಿರುವ ಜಾಕೇಟ್‌ಗಳನ್ನು ನೀಡುವುದಾಗಿ ಹೇಳಿದರು.

ಶಾಸಕ ಕೆ.ಸಿ.ವೀರೇಂದ್ರ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದರು. ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಿ.ದಿನೇಶ್ ಗೌಡಗೆರೆ, ಕರ್ನಾಟಕ ಮಾಧ್ಯಮ ಅಕಾಡೆಮಿಯ ನೂತನ ಸದಸ್ಯ ಎಂ.ಎನ್.ಅಹೋಬಲ ಪತಿ, ಪತ್ರಕರ್ತರ ಸಂಘದ ರಾಷ್ಟ್ರೀಯ ಮಂಡಳಿ ಸದಸ್ಯ ಬಿ.ವಿ.ಮಲ್ಲಿಕಾರ್ಜುನಯ್ಯ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಸೇರಿದಂತೆ ಇತರೆ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.ವಿವಿಧ ಮಾಧ್ಯಮ ಪ್ರತಿನಿಧಿಗಳು, ಗಣ್ಯಮಾನ್ಯರು, ಕನ್ನಡ ಪರ ಹೋರಾಟಗಾರರು, ರೈತ ಸಂಘ, ಕಮ್ಯುನಿಷ್ಟ್ ಪಕ್ಷದ ಪ್ರತಿನಿಧಿಗಳು, ಹಲವು ಸಂಘಟನೆಗಳ ಪದಾಧಿಕಾರಿಗಳು ಹಾಗೂ ಪತ್ರಿಕಾ ವಿತರಕರ ಸಂಘಗಳ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಡೆಂಗ್ಯೂ ಪರೀಕ್ಷೆ: ಖಾಸಗಿ ಲ್ಯಾಬ್‌ಗಳು ವಿಧಿಸುವ ದರ ಸಾರ್ವಜನಿಕರಿಗೆ ಹೊರೆಯಾಗದಿರಲಿ: ವೀರೇಂದ್ರ ಪಪ್ಪಿ

» **ಚಿತ್ರದುರ್ಗ**



ಡೆಂಗ್ಯೂ ಪರೀಕ್ಷೆಗೆ ಖಾಸಗಿ ನರ್ಸಿಂಗ್ ಹೋಂ, ಲ್ಯಾಬ್‌ಗಳು ವಿಧಿಸುವ ದರದ ಬಗ್ಗೆ ನಿಗಾವಹಿಸಿ, ಸರ್ಕಾರ ನಿಗಧಿಪಡಿಸಿದ ದರ ಮಾತ್ರವೇ ತೆಗೆದುಕೊಳ್ಳಬೇಕು. ಸಾರ್ವಜನಿಕರಿಗೆ ಹೊರೆಯಾಗದಂತೆ ಸೂಕ್ತ ಕ್ರಮ ಜರುಗಿಸಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಡೆಂಗ್ಯೂ ಜ್ವರ ನಿಯಂತ್ರಣ ಕ್ರಮಕ್ಕಾಗಿ ಆರೋಗ್ಯ ಇಲಾಖೆಯ ವಿವಿಧ ಹಂತದ ಅಧಿಕಾರಿಗಳ ತುರ್ತು ಸಭೆಯಲ್ಲಿ ಮುಂಜಾಗ್ರತಾ ಕ್ರಮಗಳ ಪರಿಶೀಲನೆ ನಡೆಸಿ ಅವರು ಮಾತನಾಡಿದರು. ನಗರದ ಖಾಸಗಿ ಲ್ಯಾಬ್‌ಗಳಿಗೆ ಭೇಟಿ ನೀಡಿ ಸೂಕ್ತ ಕ್ರಮ ವಹಿಸಿ, ಡೆಂಗ್ಯೂ ಮುಂಜಾಗ್ರತಾ ಕ್ರಮಕ್ಕಾಗಿ ವಿವಿಧ ಇಲಾಖೆಗಳ ಸಮನ್ವಯ ಸಾಧಿಸಿ ಸಹಕಾರ ಪಡೆಯಿರಿ. ಡೆಂಗ್ಯೂ ಹಾಟ್‌ಸ್ಪಾಟ್ ಗುರುತಿಸಿ ಚಿಕಿತ್ಸೆ ಸಮೀಕ್ಷೆ ಇತರೆ ಕ್ರಮ ಜರುಗಿಸಬೇಕು ಎಂದು ಸೂಚಿಸಿದರು. ಶಾಲಾ ಶಿಕ್ಷಣ ಇಲಾಖಾ ಮುಖ್ಯಸ್ಥರು ಎಲ್ಲಾ ಶಾಲೆಗಳಲ್ಲಿ ಮಕ್ಕಳ ಮೂಲಕ ಡೆಂಗ್ಯೂ ಜಾಗೃತಿ ಜಾಥಾ ನಡೆಸುವ ಮೂಲಕ ಸಾರ್ವಜನಿಕರಿಗೆ ಮಾಹಿತಿ ಶಿಕ್ಷಣ ನಡೆಸಲು ಕ್ರಮ ವಹಿಸುವಂತೆ ತಾಕೀತು ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಡಾ.ಬಿ.ವಿ.ಗಿರೀಶ್ ಉಪಸ್ಥಿತರಿದ್ದರು.

# ಕೊರ್ಲಕುಂಟೆ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯ: ಆರ್‌ಸಿಬಿಗೆ ಗೆಲುವು



**ಚಳ್ಳಕೆರೆ:** ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಕೊರ್ಲಕುಂಟೆ ಗ್ರಾಮದಲ್ಲಿ ಯುವಕರ ಕ್ರಿಕೆಟ್ ತಂಡ ಮೂರು ದಿನಗಳ ಕೊರ್ಲಕುಂಟೆ ಪ್ರೀಮಿಯರ್ ಲೀಗ್ ಪಂದ್ಯ ನಡೆಸಿದ್ದು ಅಂತಿಮ ದಿನ ಅದೇ ಗ್ರಾಮದ ಆರ್‌ಸಿಬಿ ಮತ್ತು ಸಿಎಸ್‌ಕೆ ತಂಡಗಳು ಕ್ರಮವಾಗಿ ಮೊದಲನೇ ಮತ್ತು ಎರಡು ಬಹುಮಾನವನ್ನು ಪಡೆದವು. ಗ್ರಾಮದ ಕ್ರೀಡಾಂಗಣದಲ್ಲೆ ನಡೆದ ಈ ಪಂದ್ಯದಲ್ಲಿ ಸುತ್ತಮುತ್ತಲ ಗ್ರಾಮದ ಹಲವಾರು ತಂಡಗಳು ಭಾಗವಹಿಸಿದ್ದವು. ಅಂತಿಮ ದಿನದಂದು ಆರ್‌ಸಿಬಿ ಮತ್ತು ಸಿಎಸ್‌ಕೆ ತಂಡಗಳು ಉತ್ತಮ ಆಟ ಪ್ರದರ್ಶಿಸಿದವಾದರೂ ಆರ್‌ಸಿಬಿ ತಂಡ ಮೊದಲ ಬಹುಮಾನ ಪಡೆದರೆ, ಸಿಎಸ್‌ಕೆ ತಂಡ ದ್ವಿತೀಯ ಬಹುಮಾನವನ್ನು ಪಡೆದುಕೊಂಡಿತು.

## ಪ್ರಮುಖ ಸುದ್ದಿ

# ಪದವಿ ಕಾಲೇಜು ಅಭಿವೃದ್ಧಿಗೆ 2.ಕೋಟಿ ಹಣ ಬಿಡುಗಡೆ

» **ಹೊಸದುರ್ಗ**



ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಈ ಬಾರಿಗೆ ನ್ಯಾಕ್ ಕಮಿಟಿ "ಬಿ" ಶ್ರೇಣಿ ಗ್ರೇಡ್ ನೀಡಿದೆ. ಹಿಂದೆ "ಬಿ" ಗ್ರೇಡ್ ಇತ್ತು. ನಮ್ಮ ಪದವಿ ಕಾಲೇಜು ಜಿಲ್ಲೆಯಲ್ಲಿಯೇ ಒಳ್ಳೆಯ ಕಾಲೇಜು ಎಂಬ ಹಿರಿಮೆ ಪಡೆಯಬೇಕೆಂಬ ಅಭಿಲಾಷೆ ಇದೆ. ಉನ್ನತ ಶಿಕ್ಷಣ ಸಚಿವರಿಂದ ಕಾಲೇಜು ಅಭಿವೃದ್ಧಿಗೆ 2.ಕೋಟಿ ಅನುದಾನ ಕೇಳಲಾಗಿತ್ತು. ಸಚಿವರು ನಮ್ಮ ಮನವಿಗೆ ಒಪ್ಪಿದ್ದಾರೆ. ಸದ್ಯದಲ್ಲಿಯೇ, ಕಾಲೇಜು ಅಭಿವೃದ್ಧಿಗೆ ಹಣ ಬಿಡುಗಡೆಯಾಗಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಶನಿವಾರ ಕಾಲೇಜು ವತಿಯಿಂದ ಏರ್ಪಡಿಸಿದ್ದ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್ ಕ್ರಾಸ್, ರೋವರ್ಸ್ ಮತ್ತು ರೇಂಜರ್ಸ್ ಘಟಕಗಳ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ ಬಾರಿ ನಾನು ಶಾಸಕನಾಗಿದ್ದ ಅವಧಿಯಲ್ಲಿ ಪಟ್ಟಣಕ್ಕೆ ಹಲವು ಹಾಸ್ಟೆಲ್ ಗಳನ್ನು ತಂದಿದ್ದೇನೆ. ಮತ್ತೆ ಇದೀಗ, 100 ವಿದ್ಯಾರ್ಥಿಗಳಿಗೆ ಹಾಸ್ಟೆಲ್ ನಿರ್ಮಾಣ ಮಾಡಲಾಗುವುದು. ಶೀಘ್ರದಲ್ಲಿಯೇ, ಆಡಿಟೋರಿಯಂ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಿ, ನಿಮ್ಮ ಮುಂದಿನ ಕಾರ್ಯಕ್ರಮ ಅಲ್ಲಿಯೇ ನಡೆಯುವಂತೆ ಮಾಡುತ್ತೇವೆ. ವಿದ್ಯಾರ್ಥಿಗಳಿಗೆ ಬೇಕಾಗಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿದ್ಧರಿದ್ದೇವೆ. ನೀವು ಕೂಡ ಪಠ್ಯದ ಶಿಕ್ಷಣದ ಜೊತೆಗೆ ಸಂಸ್ಕಾರಯುತ ಶಿಕ್ಷಣವನ್ನು ಕಲಿತು, ನಿಮ್ಮ ತಂದೆ ತಾಯಿಗಳಿಗೆ, ಕುಟುಂಬಕ್ಕೆ, ಪಾಠ ಹೇಳಿಕೊಟ್ಟ ಗುರುಗಳಿಗೆ ಮತ್ತು ನಿಮ್ಮೂರಿಗೆ ಒಳ್ಳೆಯ ಹೆಸರು ತನ್ನಿ. ಬಡ ಕುಟುಂಬದ ಮಕ್ಕಳನ್ನು ಶೈಕ್ಷಣಿಕವಾಗಿ ಮೇಲೆತ್ತಬೇಕು ಎನ್ನುವ ಸದುದ್ದೇಶದಿಂದ ಸರ್ಕಾರ ಹಲವು ಕಾರ್ಯಕ್ರಮಗಳನ್ನು ರೂಪಿಸಿದೆ. ಅವುಗಳನ್ನು ಸದುಪಯೋಗಪಡಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಪದವಿ ದೊಡ್ಡದಲ್ಲ, ಸಂಸ್ಕಾರ ದೊಡ್ಡದು. ಯಾವುದೇ ಪದವಿ ಇದ್ದರೂ, ಸಂಸ್ಕಾರಯುತ ಶಿಕ್ಷಣ ಬಹಳ ಮುಖ್ಯ. ನೀವೇ ಈ ದೇಶದ ಆಸ್ತಿ. ನಿಮಗೆ ಸವಾಲುಗಳ ಜೊತೆಗೆ ಜವಾಬ್ದಾರಿಗಳಿದ್ದು, ಎಲ್ಲವನ್ನು ಎದುರಿಸುವ ಸ್ಥಿರತೆ ನಿಮ್ಮಲ್ಲಿರಬೇಕು. ಬಡ ಕುಟುಂಬದ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಾಯ ಮಾಡಿದರೆ, ಆ ಕುಟುಂಬದ ಮಕ್ಕಳು ಸಮಾಜದ ಮುಖ್ಯ ವಾಹಿನಿಗೆ ಬರುತ್ತಾರೆ. ಮಕ್ಕಳು ಕಲಿಯುವ ವಯಸ್ಸಿನಲ್ಲಿ ಯಾವುದೇ ದುಶ್ಚಟಕ್ಕೆ, ದುರಭ್ಯಾಸಕ್ಕೆ ಬಲಿಯಾಗದೆ, ಒಳ್ಳೆಯ ಶ್ರದ್ಧೆ, ಹವ್ಯಾಸಗಳು ಇದ್ದಾಗ ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯ. ನಾಡಿನ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಎತ್ತಿ ಹಿಡಿಯುವ ಕೆಲಸ ನಿಮ್ಮಿಂದಾಗಬೇಕು. ನಿಮ್ಮ ತಂದೆ ತಾಯಿಗಳ ನಿರೀಕ್ಷೆ ಹುಸಿಯಾಗದಂತೆ ಕುಟುಂಬ ಕಟ್ಟುವ, ದೇಶ ಕಟ್ಟುವ ಮಹತ್ವದ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ಚಟುವಟಿಕೆಗಳಲ್ಲಿ ಜಯಶೀಲರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ ಅಭಿನಯಿಸಲಾಯಿತು. ಈ ವೇಳೆ ಕಾಲೇಜು ಪ್ರಾಂಶುಪಾಲರಾದ ಬ್ರಹ್ಮರಂಬ ಅಧ್ಯಕ್ಷತೆ ವಹಿಸಿದ್ದರು. ಕಾಲೇಜು ಅಭಿವೃದ್ಧಿ ಸಲಹಾ ಸಮಿತಿಯ ಸದಸ್ಯರಾದ ಆಗ್ರೋ ಶಿವಣ್ಣ, ಕೆ.ಸಿ.ನಿಂಗಪ್ಪ, ಇಲ್ಕಲ್ ವಿಜಯಕುಮಾರ್, ಅಶ್ರಫ್ ಮತ್ತು ದೀಪಿಕಾ ಸತೀಶ್ ಸೇರಿದಂತೆ ಇನ್ನಿತರ ಮುಖಂಡರು, ಉಪನ್ಯಾಸಕರು ಹಾಗೂ ನೂರಾರು ವಿದ್ಯಾರ್ಥಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಶಿಫಾರಸು ಸಲ್ಲಿಸಲು ಸೂಚನೆ

» **ಚಿತ್ರದುರ್ಗ**

ಕೇಂದ್ರ ಗೃಹ ಮಂತ್ರಾಲಯ ಭಾರತ ಸರ್ಕಾರದ ಅಧಿಸೂಚನೆಯಂತೆ ಸಮಾಜದ ಯಾವುದೇ ಕ್ಷೇತ್ರಗಳಲ್ಲಿ ಅಂದರೆ ಕಲೆ, ಸಾಹಿತ್ಯ ಮತ್ತು ಶಿಕ್ಷಣ ಕ್ರೀಡೆ, ವೈದ್ಯಕೀಯ, ಸಮಾಜ ಸೇವೆ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳನ್ನು, ನಾಗರೀಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಶಿಫಾರಸ್ಸು ಸಲ್ಲಿಸುವಂತೆ ಸೂಚನೆ ನೀಡಲಾಗಿದೆ. ಪದ್ಮ ಶ್ರೇಣಿಯ ಪ್ರಶಸ್ತಿಗಳಾದ ‘ಪದ್ಮ ವಿಭೂಷಣ’, ‘ಪದ್ಮ ಭೂಷಣ’, ಮತ್ತು ‘ಪದ್ಮಶ್ರೀ’ ಪ್ರಶಸ್ತಿಗಳನ್ನು ಗಣರಾಜ್ಯೋತ್ಸವ ದಿನದ ಹಿಂದಿನ ದಿನದಂದು ಕೇಂದ್ರ ಸರ್ಕಾರದಿಂದ ಪ್ರಕಟಿಸಲಾಗುತ್ತದೆ. 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಅನ್ವಯಿಸುವ ನಿಯಮಾವಳಿಗಳು https://padmaawards.gov.inರಲ್ಲಿ ಲಭ್ಯವಿರುತ್ತದೆ. ಪದ್ಮಶ್ರೇಣಿ ಪ್ರಶಸ್ತಿಗಳಿಗೆ ಸಂಬಂಧಿಸಿದ ಶಿಫಾರಸ್ಸಿನ ಪ್ರಸ್ತಾವನೆಗಳನ್ನು ಸಲ್ಲಿಸುವ ಪ್ರಕ್ರಿಯೆಯು ಸೆಪ್ಟಂಬರ್ 15 ಕ್ಕೆ ಮುಕ್ತಾಯಗೊಳ್ಳಲಿದೆ ಎಂದು ಕೇಂದ್ರ ಸರ್ಕಾರವು ತಿಳಿಸಿದ್ದು, ಹೀಗಾಗಿ ರಾಜ್ಯ ಸರ್ಕಾರವು ಪ್ರಸ್ತಾವನೆಗಳನ್ನು ಪರಿಶೀಲಿಸಿ ಸೆ. 15 ರೊಳಗೆ ಕೇಂದ್ರ ಸರ್ಕಾರಕ್ಕೆ ಆನ್‌ಲೈನ್ ಮೂಲಕ ಮಾತ್ರ ಕಳುಹಿಸಬೇಕಾಗಿರುವುದರಿಂದ ತಮ್ಮ ಪ್ರಸ್ತಾವನೆಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬೇಕು. ಅರ್ಜಿಯನ್ನು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಹಾಗೂ ಸಾಫ್ಟ್ ಪ್ರತಿಗಳನ್ನು ಇ-ಮೇಲ್ ವಿಳಾಸ uspolitical-dpar@karnataka.gov.in ಕ್ಕೆ ಕಳುಹಿಸಬೇಕು. ಆಗಸ್ಟ್ 31 ರ ನಂತರ ಬರುವ ಯಾವುದೇ ಪ್ರಸ್ತಾವನೆಗಳನ್ನು/ಮನವಿಗಳನ್ನು ಪರಿಗಣಿಸಲು ಸಾಧ್ಯವಿರುವುದಿಲ್ಲ.

‘ಕ್ರೀಡೆ’ ಗೆ ಸಂಬಂಧಿಸಿದಂತೆ, ಪದ್ಮಶ್ರೇಣಿ ಪ್ರಶಸ್ತಿಗಳಿಗೆ ಅರ್ಜಿಗಳನ್ನು ಸಲ್ಲಿಸುವವರು ನಿಗಧಿತ ಅರ್ಜಿ ನಮೂನೆಯನ್ನು ಪಡೆದು ಪ್ರಸ್ತಾವನೆಗಳನ್ನು ಆಗಸ್ಟ್ 20 ರೊಳಗಾಗಿ ಈ ಕ್ರೀಡಾ ಇಲಾಖೆ ಕಚೇರಿಗೆ ಕಳುಹಿಸಿಕೊಡಲು ಹಾಗೂ ಸಾಫ್ಟ್ ಪ್ರತಿಗಳನ್ನು uspolitical-dpar@karnataka.gov.in ಗೆ ಇ-ಮೇಲ್ ಮಾಡುವಂತೆ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಡುಗೊಲ್ಲ, ಮ್ಯಾಸಬೇಡರ ಬುಡಕಟ್ಟು ಸಂಸ್ಕೃತಿಗೆ ಜಿಲ್ಲೆಯ ಕೊಡುಗೆ ಅಪಾರ: ಚಿಂತಕ ಕೋಡಪ್ಪ

» **ಚಳ್ಳಕೆರೆ**

ಕರ್ನಾಟಕಮಧ್ಯಭಾಗದಲ್ಲಿರುವಚಿತ್ರದುರ್ಗ ಜಿಲ್ಲೆ ಬುಡಕಟ್ಟು ಸಂಸ್ಕೃತಿಯನ್ನು ಹೊಂದಿದ ರಾಜ್ಯದ ಪ್ರಮುಖ್ಯ ಜಿಲ್ಲೆಯಲ್ಲಿ ಒಂದಾಗಿದೆ. ವಿಶೇಷವಾಗಿ ಈ ಜಿಲ್ಲೆಯ ಕಾಡುಗೊಲ್ಲ, ಮ್ಯಾಸಬೇಡರ ಬುಡಕಟ್ಟು ಸಂಸ್ಕೃತಿಯ ಇತಿಹಾಸವನ್ನು ಪ್ರತಿಬಿಂಬಿಸುವ ಮಹಾನ್ ನಾಯಕರು. ಈ ಎರಡೂ ಸಮುದಾಯಗಳು ಬುಡಕಟ್ಟು ಸಂಸ್ಕೃತಿಗೆ ಮುಕುಟವಿಟ್ಟಂತೆ ಎಂದು ಖ್ಯಾತಚಿಂತಕ, ನಿವೃತ್ತ ಶಿಕ್ಷಕ ಕೋಡಪ್ಪ ತಿಳಿಸಿದರು.

ಅವರು, ತಾಲ್ಲೂಕಿನ ದೇವರಮರಿಕುಂಟೆ ಗ್ರಾಮದ ಭವನದಲ್ಲಿ ಗ್ರಾಮೀಣ ಸಾಹಿತ್ಯ ಪರಿಷತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಸಂಸ್ಕೃತಿ ಸಂಭ್ರಮ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಚಿತ್ರದುರ್ಗ ಜಿಲ್ಲೆಯ ಬುಡಕಟ್ಟು ಸಮುದಾಯದ ಬಗ್ಗೆ ವಿಶೇಷ ಸಂಶೋಧನೆ ಮಾಡಿದ ಖ್ಯಾತ ಜಾನಪದ ಸಾಹಿತಿ ಮೀರಸಾಬಿಹಳ್ಳಿ ಶಿವಣ್ಣ,




ಮ್ಯಾಸಬೇಡರ ಪಡೆಯ ಬಗ್ಗೆ ನಾಟಕ ಅಕಾಡೆಮೆಯಮಾಜಿಸದಸ್ಯಪಿ.ತಿಪ್ಪೇಸ್ವಾಮಿ ಪರಿಶ್ರಮದಿಂದ ಸಂಶೋಧನೆ ನಡೆಸಿ ಈ ಸಮುದಾಯಗಳು ನಡೆಸಿಕೊಂಡು ಬಂದ ಆಚಾರ ವಿಚಾರಗಳು ಹಾಗೂ ಸಂಸ್ಕೃತಿಯ ಬಗ್ಗೆ ಅಧ್ಯಯನ ನಡೆಸಿ ಬುಡಕಟ್ಟು ಸಂಸ್ಕೃತಿಯ ಬಗ್ಗೆ ಇನ್ನೂ ಹೆಚ್ಚು ಆಸಕ್ತಿ ಹುಟ್ಟುವಂತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಗ್ರಾಮೀಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರು, ಖ್ಯಾತ ಲೇಖಕ ಬಿ.ತಿಪ್ಪಣ್ಣಮರಿಕುಂಟೆ ಮಾತನಾಡಿ, ಎರಡೂ ಬುಡಕಟ್ಟು ಸಮುದಾಯಗಳು ನೂರಾರು ವರ್ಷಗಳಿಂದ ಅವರ ಪರಂಪರೆ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಸಫಲವಾಗಿವೆ. ಯಾವುದೇ ಆಧುನಿಕತೆಯ ಸ್ಪರ್ಶವಿಲ್ಲದೆ ಗ್ರಾಮೀಣ ಭಾಷೆ, ಪರಿಸರದಲ್ಲೇ ಕಾಡುಗೊಲ್ಲರು ಹಾಗೂ ಮ್ಯಾಸಬೇಡರ ಪರಂಪರೆಯ ಬಗ್ಗೆ ಮಾಹಿತಿಯನ್ನು ನೀಡುವಲ್ಲಿ ಯಶಸ್ವಿಯಾಗಿದ್ದಾರೆ. ಈ ಎರಡೂ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಅಧ್ಯಯವಾಗಬೇಕಿದೆ. ಇಂದಿನ ಯುವ ಜನಾಂಗ ಇವುಗಳನ್ನು ಆಧಾರವಾಗಿಟ್ಟುಕೊಂಡು ಮುನ್ನಡೆಯಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಮ್ಮ ಮಾತನಾಡಿ, ಗ್ರಾಮದ ಗ್ರಾಮೀಣ ಪರಿಷತ್ ಕಳೆದ ಸುಮಾರು 40 ವರ್ಷಗಳಿಂದ ತನ್ನ ಕಾರ್ಯಚಟುವಟಿಕೆಯನ್ನು ಯಶಸ್ವಿಯಾಗಿ ನಡೆಸಿಕೊಂಡು ಬಂದಿದೆ. ಸಾಹಿತ್ಯ ಮತ್ತು ಸಾಹಿತಿಗಳಿಗೆ ಗ್ರಾಮೀಣ ಸೊಗಡಿನ ಬಗ್ಗೆ ಹೆಚ್ಚು ಮಾಹಿತಿ ಪಡೆಯುತ್ತಾರೆ. ಗ್ರಾಮೀಣ ಸಾಹಿತ್ಯದಿಂದಲೇ ಇಂದು ಎಲ್ಲಾರೀತಿಯ ಸಾಹಿತ್ಯ ಪ್ರಾಕಾರಗಳನ್ನು ನಾವುನೋಡಬಹುದಾಗಿದೆ. ಗ್ರಾಮೀಣ ಪರಿಷತ್ ಕಾರ್ಯ ಗ್ರಾಮದ ಜನರ ಮನಸ್ಸು ಗೆಲ್ಲುವಲ್ಲಿ ಯಶಸ್ವಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಮಾಜಿ ಉಪಾಧ್ಯಕ್ಷ ಎಂ.ಎಸ್. ಮಂಜುನಾಥ, ದಳಪತಿಗೋವಿಂದಪ್ಪ, ರೈತ ಮುಖಂಡ ಶಿವಶಂಕರಮೂರ್ತಿ, ಎಂ.ಓ.ಬೋರಣ್ಣ, ರೂಪ, ಪಾಪಣ್ಣ, ಎಚ್.ತಿಪ್ಪೇಸ್ವಾಮಿ, ನರಸಿಂಹಪ್ಪ, ವಿಜಯಣ್ಣ, ಗುರುವಪ್ಪ ಮುಂತಾದವರು ಉಪಸ್ಥಿತರಿದ್ದರು.

## ಸಂದೀಪನಿ ಶಾಲಾ ಮಕ್ಕಳಿಗೆ ವೈದ್ಯಕೀಯ ಅರಿವು ಕಾರ್ಯಗಾರ

# ವೈದ್ಯಕೀಯ ಕ್ಷೇತ್ರದ ಬಗ್ಗೆ ತಿಳಿಸಿಕೊಟ್ಟ ಡಾ.ಸಂಜಯ್

» **ಹೊಸದುರ್ಗ**

ಶಿಕ್ಷಕರು ಮಕ್ಕಳಿಗೆ ವಿದ್ಯಾರ್ಥಿ ಜೀವನದಲ್ಲಿ ಗುಣಾತ್ಮಕ ಶಿಕ್ಷಣ ಪಡೆಯುವುದರೊಂದಿಗೆ ಮೌಲ್ಯಯುತ ಶಿಕ್ಷಣ ನೀಡಿದಾಗ ಎಂತಹ ಸವಾಲನ್ನಾದರೂ ಎದುರಿಸಬಲ್ಲರು. ಒಬ್ಬ ವೈದ್ಯ ಪ್ರತಿ ಕ್ಷಣದಲ್ಲಿಯೂ ವೈದ್ಯಕೀಯ ಕ್ಷೇತ್ರದಲ್ಲಿ ಸವಾಲನ್ನು ಎದುರಿಸಬೇಕಾದ ಅನಿವಾರ್ಯತೆ ಇದೆ ವೈದ್ಯರು ಅತ್ಯಂತ ಹೆಚ್ಚು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಹಿರಿಯ ಆರೋಗ್ಯ ವೈದ್ಯಾಧಿಕಾರಿ ಡಾ.ಯು.ಎಸ್.ಸಂಜಯ್ ತಿಳಿಸಿದರು.

ಪಟ್ಟಣದ ಸಂಜಯ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಶನಿವಾರ ನಡೆದ ಸಂದೀಪನಿ ಇಂಡಿಯನ್ ಇಂಟರ್ ನ್ಯಾಷನಲ್ ಪಬ್ಲಿಕ್ ಸ್ಕೂಲ್ ಶಾಲಾ ಮಕ್ಕಳಿಗೆ ವೈದ್ಯಕೀಯ



ಅರಿವು ತರಬೇತಿ ಕಾರ್ಯಗಾರದಲ್ಲಿ ಅವರು ಮಾತನಾಡಿದರು. ವೈದ್ಯಕೀಯ ಕ್ಷೇತ್ರವೆಂಬುದು ಪ್ರತಿನಿತ್ಯ ಕಲಿಯಬೇಕಾದ ಒಂದು ಅಮೂಲ್ಯ ಸಾಧನ. ಇಲ್ಲಿ ನಾವು ವೈದ್ಯರಾದರುವಿದ್ಯಾರ್ಥಿಯಾಗಿಪ್ರತಿದಿನವೂ ಕಲಿಯಬೇಕಾದದ್ದು ಬಹಳಷ್ಟು ಇದೆ. ನಮ್ಮ ಪ್ರಯೋಗಗಳು ಮಾನವನ ಮೇಲೆ ಮಾಡುವ ಪ್ರಯೋಗಗಳಾಗಿರುವುದರಿಂದ ಅತ್ಯಂತ ಜವಾಬ್ದಾರಿಯುತವಾಗಿರುತ್ತವೆ ಎಂದು ತಿಳಿಸಿದರು.ಮಕ್ಕಳು ಶಾಲಾ ಹಂತದಲ್ಲಿ ತಮ್ಮ ನೆಚ್ಚಿನ ಶಿಕ್ಷಣದ ಆಯ್ಕೆಯನ್ನು ಮಾಡಿಕೊಳ್ಳುವಾಗ ಅವರಿಗೆ ಇಷ್ಟಾನುಸಾರ ಕೋರ್ಸ್ ಆಯ್ಕೆ ಮಾಡಿಕೊಳ್ಳಲು ಪೋಷಕರು ಅವಕಾಶ ನೀಡಬೇಕು. ಆ ಮಕ್ಕಳಿಗೆ ಪ್ರಥಮ ಹಂತದಲ್ಲಿ ವಿಶೇಷ ತರಬೇತಿ ಪಡೆಯುವ ಅವಕಾಶ ಕಲ್ಪಿಸಿ ಕೊಡಬೇಕು. ವೈದ್ಯಕೀಯ ಕ್ಷೇತ್ರಕ್ಕೆ ಬರುವ ಮಕ್ಕಳಿಗೆ ಪ್ರಾಯೋಗಿಕವಾಗಿ ಹೆಚ್ಚು ಹೆಚ್ಚು ಕಲಿಸುವ ಜವಾಬ್ದಾರಿ ಶಿಕ್ಷಕರ ಮೇಲೆ ಇರುತ್ತದೆ. ಸಮಾಜಮುಖಿ ಕೆಲಸ ಮಾಡುವ ಈ ವೈದ್ಯಕೀಯ ಕ್ಷೇತ್ರ ಅತ್ಯಂತ ಮಹತ್ವಪೂರ್ಣವಾದದ್ದು ರೋಗಿಗಳು ನಮ್ಮನ್ನು ನಂಬಿ ಚಿಕಿತ್ಸೆಗೊಂದು ಬರುತ್ತಾರೆ ನಾವು ರೋಗಿಗಳನ್ನ ಅತ್ಯಂತ ಜವಾಬ್ದಾರಿಯಿಂದ ನೋಡಿಕೊಳ್ಳಬೇಕು ಎಂದು ಹೇಳಿದರು.ಇದೇ ಸಂದರ್ಭದಲ್ಲಿ ವೈದ್ಯರಾದ ಡಾ.ನಿಸರ್ಗ, ಡಾ.ಬಹುಬಲಿ, ಡಾ.ಭೂಮಿಕಾ ಡಾ.ಹರ್ಷಿತ್, ವಿದ್ಯಾರ್ಥಿಗಳಿಗೆ ಎಕ್ಸರೇ, ಪ್ರಯೋಗಾಲಯ, ಕೀಲು ಮೂಳೆ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ಪ್ರಕೃತಿ ಚಿಕಿತ್ಸೆ, ಯೋಗ ಚಿಕಿತ್ಸೆ, ಬಗ್ಗೆ ಮಾಹಿತಿ ನೀಡಲಾಯಿತು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T